ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 27 RNI Number : KNKAN/25/A2770 31-01-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :27 ರಾಯಚೂರು 31-01-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ವಿಧಾನಸಭೆಯಲ್ಲಿ ಗದ್ದಲ ಎಬ್ಬಿಸಿದ ಬಳ್ಳಾರಿ ಘರ್ಷಣೆ: ಬಿ.ನಾಗೇಂದ್ರ -ಜನಾರ್ದನ ರೆಡ್ಡಿ ಸವಾಲು, ಪ್ರತಿಸವಾಲು



ಬೆಂಗಳೂರು,ಜ.30–

ವಿಧಾನಸಭೆಯಲ್ಲಿ ಬಳ್ಳಾರಿ ಗಲಾಟೆ ಗದ್ದಲಕ್ಕೆ ಕಾರಣವಾಯಿತು. ಬಿ.ನಾಗೇಂದ್ರ ಹಾಗೂ ಜನಾರ್ದನ ರೆಡ್ಡಿ ಮಧ್ಯೆ ಸವಾಲು ಪ್ರತಿಸವಾಲುಗಳಿಗೆ ವೇದಿಕೆಯಾಯಿತು.

ರಾಜ್ಯಪಾಲರ ಭಾಷಣ ಮೇಲಿನ ವಂದನಾ ನಿರ್ಣಯದ ಚರ್ಚೆ ವೇಳೆ ವಿಷಯ ಪ್ರಸ್ತಾಪಿಸಿದ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಕೆಲವು ಅಸತ್ಯಗಳನ್ನು ಜನಾರ್ದನ ರೆಡ್ಡಿ ಮಾತನಾಡಿದ್ದಾರೆ. ಜನತೆಯ ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾರೆ. ಇಲ್ಲದೇ ಇರುವ ಆರೋಪವನ್ನು ಮಾಡಿದ್ದಾರೆ. ಬ್ಯಾನರ್ ಹಾಕಿದ್ದು ತಪ್ಪು ಎಂದು ಸಿಎಂ ಹೇಳಿದ್ದಾರೆ ಎಂದಿದ್ದಾರೆ. ಆದರೆ ಸಿಎಂ ಆ ರೀತಿಯಾಗಿ ಹೇಳಿಲ್ಲ. ಡಿಸಿಎಂ ಡಿಕೆಶಿಯವರ ಹೇಳಿಕೆಯನ್ನು ತಪ್ಪಾಗಿ ಹೇಳಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ವಾಲ್ಮೀಕಿ ಬ್ಯಾನರ್ ತೆಗೆದುಹಾಕಿ ಬಿಜೆಪಿ ಪರ ಘೋಷಣೆ ಕೂಗಿದ್ದಾರೆ. ಗಲಾಟೆ ತಡೆಯಲು ಪೊಲೀಸರು ಕೆಲಸ ಮಾಡಿದ್ದಾರೆ. ಗಲಾಟೆ ಆದ ಸಮಯದಲ್ಲಿ ನೋಡೋಕೆ ಹೆಚ್ಚು ಜನರು ಬಂದಿರುತ್ತಾರೆ. ದುರಾಡಳಿತ ಅನ್ನೋ ಪದವನ್ನು ಬಳಕೆ ಮಾಡಿದ್ದಾರೆ. ಗೃಹ ಮಂತ್ರಿಗಳು ತೀವ್ರ ರೀತಿಯಲ್ಲಿ ಗಮನ ಹರಿಸಿದ್ದಾರೆ. ತಪ್ಪು ಮಾಡಿದವರಿಗೆ ಶಿಕ್ಷೆ ಆಗಲಿದೆ.

ಬಿಜೆಪಿಯವರು ಪ್ರತಿಭಟನೆ ಮಾಡಿದ್ರು, ಯಾರೂ ತೊಂದರೆ ಮಾಡಲಿಲ್ಲ. ನಾವು ತಕರಾರು ಎತ್ತಲಿಲ್ಲ. ಆದರೆ ಭಾಷಣದಲ್ಲಿ ರಾಮುಲು ಎಚ್ಚರಿಕೆ ನೀಡಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರನ್ನು ಹುಡುಕಾಡಿ ಹೊಡಿತೇವೆ ಅಂತ ರಾಮುಲು ಭಾಷಣದಲ್ಲಿ ಹೇಳಿದ್ದಾರೆ. ಮತ್ತೆ ರಿಪಬ್ಲಿಕ್ ಬಳ್ಳಾರಿ ಮಾಡಲು ಹೊರಟಿದ್ದೀರಾ ಎಂದು ಪ್ರಶ್ನಿಸಿದರು.

ಈ ವೇಳೆ ಬಳ್ಳಾರಿ ಘರ್ಷಣೆ ಬಗ್ಗೆ ಸದ್ದುಗದ್ದಲ ಉಂಟಾಯಿತು. ಇನ್ನೂ ನಿಮ್ಮ ಸರ್ಕಾರವೇನು ಇಲ್ಲ. ಆಗಲೇ ನೀವು ಇಷ್ಟೊಂದು ಹೇಳ್ತೀರ. ಭರತ್ ರೆಡ್ಡಿ ಜೊತೆ ನನಗೆ ಸಂಬಧವೇನಿಲ್ಲ. ಆದರೆ ಅವರು ನನ್ನ ಪಕ್ಷದ ಶಾಸಕ. ಅವರನ್ನು ಪಾತಾಳದಲ್ಲಿದ್ರೂ ಹುಡುಕಿ ಹೊಡೆಯುತ್ತೇವೆ ಅಂತಾರೆ. ನಮ್ಮ ಸರ್ಕಾರ ಬಂದಾಗ ಹುಡುಕಿ ಹೊಡೆಯುತ್ತೇವೆ ಅಂತಾರೆ. ಇನ್ನೂ ಏನು ಬಂದೇ ಇಲ್ಲ. ಜನಾಭಿಪ್ರಾಯ ಬರಬೇಕು ಆಮೇಲೆ ಅದೆಲ್ಲ. ಸರ್ಕಾರವೇ ಇಲ್ಲ ಆಗಲೇ ಈ ರೀತಿ ಹೇಳ್ತೀರ. ಇದು ಯಾವ ನ್ಯಾಯ ಸ್ವಾಮಿ ಎಂದು ಜನಾರ್ದನ ರೆಡ್ಡಿಗೆ ಬಿ.ನಾಗೇಂದ್ರ ಪ್ರಶ್ನಿಸಿದರು.

ನೂರು ಜನ್ಮ ಎತ್ತಿದರೂ ವಾಲ್ಮೀಕಿ ನಾಯಕ ಆಗಲ್ಲ: ಇದಕ್ಕೆ ಆಕ್ಷೇಪಿಸಿದ ಜನಾರ್ದನ ರೆಡ್ಡಿ, ಶ್ರೀರಾಮುಲು ಹುಡುಕಿ ಹುಡುಕಿ ಹೊಡೆಯುತ್ತೇವೆ ಅನ್ನಲಿಲ್ಲ. ಭರತ್ ರೆಡ್ಡಿ ಬಂಧನ ಮಾಡದಿದ್ದರೆ ಪಾತಾಳದಲ್ಲಿದ್ರೂ ಹುಡುಕಿತರುತ್ತೇವೆ ಅಂದಿದ್ದು. ರಿಪಬ್ಲಿಕ್ ಆಫ್ ಬಳ್ಳಾರಿ ಪದ ಪ್ರಯೋಗ ಬೇಡ. ರಾಮುಲು ಯಾವ ಎಚ್ಚರಿಕೆಯನ್ನೂ ಕೊಟ್ಟಿಲ್ಲ. ಪೆಟ್ರೋಲ್ ಬಾಂಬ್ ಹಾಕೋಕೆ ಮುಂದಾದ್ರು. ನಿಮ್ಮ ಕಾರ್ಯಕರ್ತ ಸಾವನ್ನಪ್ಪಿದ್ದಾರೆ. ಆದರೆ ನೀನು ಅದನ್ನೇ ಸಮರ್ಥನೆ ಮಾಡಿಕೊಳ್ಳು

3ನೇ ಪುಟಕ್ಕೆ

ವಿಜೃಂಭಣೆಯಿಂದ ಸಾಗಿದ ಶ್ರೀ ಬೂದಿ ಬಸವೇಶ್ವರ ಸ್ವಾಮಿ ಮಹಾರಥೋತ್ಸವ



ರಾಯಚೂರು,ಜ.30–

ಮಿಣಿ ಇಲ್ಲದೆ ಸಾಗುವ ರಥವೆಂದು ಪ್ರಸಿದ್ಧ ಪಡೆದ ಗಬ್ಬೂರಿನ ಶ್ರೀ ಬೂದಿ ಬಸವೇಶ್ವರ ಸ್ವಾಮಿಯ ಮಹಾರಥೋತ್ಸವ ಭಕ್ತಸಾಗರ ಝೇಂಕಾರದೊಂದಿಗೆ ಗುರುವಾರ ಸಂಜೆ ವಿಜೃಂಭಣೆಯಿಂದ ನೆರವೇರಿತು.

ಜಿಲ್ಲೆಯ ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮದ ಆರಾಧ್ಯದೈವ ಶ್ರೀ ಬೂದಿ ಬಸವೇಶ್ವರ ಮಹಾಸಂಸ್ಥಾನದ ಪೀಠಾಧಿಪತಿ ಶ್ರೀ ಬೂದಿಬಸವ ಶಿವಾಚಾರ್ಯ ಸ್ವಾಮಿ ನೇತೃತ್ವದಲ್ಲಿ ವಿವಿಧ ವಾದ್ಯಮೇಳಗಳು, ಭಕ್ತರ ಜಯಘೋಷದೊಂದಿಗೆ ಮಹಾರಥೋತ್ಸವ ವೈಭವದಿಂದ ಜರುಗಿತು.

ಜಾತ್ರೆಯಲ್ಲಿ ಭಕ್ತರು ಹಗ್ಗದ ಸಹಾಯದಿಂದ ರಥವನ್ನು ಭಕ್ತರು ಎಳೆಯುತ್ತಾರೆ. ಆದರೆ ಬೂದಿಬಸವೇಶ್ವರ ರಥವು ಆರಂಭದಲ್ಲಿ ಶ್ರೀಮತದ ಬೂದಿಬಸವ ಶಿವಾಚಾರ್ಯ ಸ್ವಾಮೀಜಿಯವರ ಆಜ್ಞೆಯಂತೆ ಮುಂದೆ ಸಾಗಿ ನಂತರ ಭಕ್ತರು ಹಗ್ಗದೊಂದಿಗೆ ಪಾದಕಟ್ಟೆಯವರೆಗೆ ಎಳೆಯುತ್ತಾರೆ.

3ನೇ ಪುಟಕ್ಕೆ

ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ಸಾರ್ವಜನಿಕರಿಗೆ ರಸ್ತೆ ಸುರಕ್ಷತೆ ಜಾಗೃತಿ ಅಗತ್ಯ: ನ್ಯಾ.ಮಾರುತಿ ಬಾಗಡೆ



ರಾಯಚೂರು ಜ.30–

ದೇಶದಲ್ಲಿ ಪ್ರತಿನಿತ್ಯ ಅಪಘಾತ ಪ್ರಕರಣಗಳು ಹೆಚ್ಚುತ್ತಿದ್ದು, ರಸ್ತೆ ಸುರಕ್ಷತೆಯ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಸೇರಿದಂತೆ ಪ್ರತಿಯೊಬ್ಬರು ಜಾಗೃತಿ ಹೊಂದುವ ಅಗತ್ಯವಿದೆ ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ ಬಾಗಡೆ ಅವರು ಹೇಳಿದರು.

ಜನವರಿ 30ರ ಶುಕ್ರವಾರ ದಂದು ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾವಾದಿಗಳ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ರೋಟರಿ ಕ್ಲಬ್, ರೊಟರಿ ಕ್ಲಬ್ ಕೃಷ್ಣ ತುಂಗೆ ಮತ್ತು ಮಾನವ ಹಕ್ಕುಗಳು ಹಾಗೂ ಭ್ರಷ್ಟಚಾರ ವಿರೋಧಿ ಸಂಸ್ಥೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಕಷ್ಟು ಮಂದಿಗೆ ಅರಿವಿನ ಅಗತ್ಯವಿದ್ದು, ಹೆಲ್ಮೆಟ್ ರಹಿತ ಹಾಗೂ ಕುಡಿದ ಮತ್ತಿನಲ್ಲಿ ವಾಹನ ಚಾಲನೆ, ಮೊಬೈಲ್ ಫೋನ್ ಬಳಕೆ, ಅತೀವೇಗದಿಂದ ಚಾಲನೆ ಮಾಡುವುದರಿಂದ ಅನೇಕ ಸಾವು ನೋವುಗಳು ಸಂಭವಿಸುತ್ತಿವೆ. ಇವುಗಳ ನಿಯಂತ್ರಣಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದರು.

ಪ್ರಸ್ತುತ ದಿನಮಾನಗಳಲ್ಲಿ ಯುವಕರು, ಚಿಕ್ಕ ಮಕ್ಕಳು ಅತ್ಯಂತ ವೇಗವಾಗಿ ದ್ವಿಚಕ್ರ ವಾಹನ ಚಾಲನೆ ಮಾಡುವ ಮೂಲಕ ಸಂಚಾರಿ ನಿಯಮಗಳನ್ನು ಯಾರೂ ಪಾಲಿಸುತ್ತಿಲ್ಲ. ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ್ದರಿಂದ ಆಕಸ್ಮಿಕ ಅಪಘಾತಗಳು ನಡೆಯುತ್ತವೆ. ಇದರಿಂದ ಜೀವ ಹಾನಿಯಾಗುತ್ತದೆ ಎಂದರು.

ದ್ವಿಚಕ್ರ ವಾಹನ ಚಾಲನೆ ಮಾಡುವವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಲೇಬೇಕು. ನ್ಯಾಯಾಲಯದಲ್ಲಿ ಬರುವ ಅಪಘಾತ ಪ್ರಕರಣಗಳಲ್ಲಿ ಹೆಚ್ಚಾಗಿ ತಲೆಗೆ ಪೆಟ್ಟು ಬಿದ್ದು ಸಾವನ್ನಪ್ಪಿದವು ಅಥವಾ ಅಂಗಾಗಗಳನ್ನು ಕಳೆದುಕೊಂಡ ಪ್ರಕರಣಗಳಾಗಿರುತ್ತವೆ. ಒಂದು ಸಾವಿರ ರೂ. ಹಣದ ಬಗ್ಗೆ ಯೋಚಿಸದೇ ಕೂಡಲೇ ಹೆಲ್ಮೆಟ್ ಖರೀದಿಸಿ ಬಳಸಿದಲ್ಲಿ ಅತ್ಯಮೂಲ್ಯವಾದ ಈ ಜೀವನ ಉಳಿಯುತ್ತದೆ. ದ್ದರಿಂದ ಜನರು ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಬೇಕೆಂದರು.

ಈ ವೇಳೆ ಕೃಷ್ಣತುಂಗೆ ರೋಟರಿ ಕ್ಲಬ್ ಅಧ್ಯಕ್ಷರಾದ ಪವನ ಕುಮಾರ್ ಕಿಶೋರ್ ಪಾಟೀಲ ಅವರು ಮಾತನಾಡಿ, ಹೆಲ್ಮೆಟ್ ಧರಿಸಿದೇ ವಾಹನ ಚಾಲನೆ ಮಾಡಿದಲ್ಲಿ ತಮ್ಮ ಜೀವನದ ಜೊತೆಗೆ ಕುಟುಂಬವನ್ನು ಅನಾಹುತಗಳಿಗೆ ತಳ್ಳಿದಂತಾಗುತ್ತದೆ ಎನ್ನುವ ತಿಳಿವಳಿಕೆ ಹೊಂದಬೇಕು ಎಂದರು.

ಈ ವೇಳೆ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾಜು

3ನೇ ಪುಟಕ್ಕೆ

ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆ ಸಿದ್ಧ



ರಾಯಚೂರು ಜನವರಿ 30–

ರಾಯಚೂರು ಜಿಲ್ಲೆಯಲ್ಲಿ 2026ರ ಫೆಬ್ರವರಿ 05, 06 ಮತ್ತು 07 ರಂದು ಮೂರು ದಿನಗಳ ಕಾಲ ಹಮ್ಮಿಕೊಂಡ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಜ್ಯೋತಿ ರಥಯಾತ್ರೆಯು ಸಿದ್ಧವಾಗಿದೆ.

ಈ ಜ್ಯೋತಿ ರಥಯಾತ್ರೆಯು ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ರಾಯಚೂರು ಜಿಲ್ಲೆಯಾದ್ಯಂತ ಸಂಚರಿಸಲಿದೆ. ರಾಯಚೂರು ಉತ್ಸವದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ನಾನಾ ಕಾರ್ಯಕ್ರಮಗಳ ಮಾಹಿತಿಯನ್ನು ಜನತೆಗೆ ಒದಗಿಸುವ ದಿಶೆಯಲ್ಲಿ ಈ ಜ್ಯೋತಿ ರಥಯಾತ್ರೆ ಸಂಚರಿಸಲಿದೆ.

ಜಿಲ್ಲಾಧಿಕಾರಿಗಳ ಮನವಿ: ಈ ಜ್ಯೋತಿ ರಥಯಾತ್ರೆಯು ಫೆ.01ರ ಬೆಳಿಗ್ಗೆ 10 ಗಂಟೆಗೆ ರಾಯಚೂರು ನಗರದ ಕರ್ನಾಟಕ ಸಂಘದಿದ ಪ್ರಾರಂಭವಾಗಲಿದ್ದು, ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆ ಸಿಬ್ಬಂದಿಯೊದಿಗೆ ತಪ್ಪದೇ ಹಾಜರಾಗಬೇಕು. ಶಾಲಾ-ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮನವಿ ಮಾಡಿದ್ದಾರೆ.

ರಾಯಚೂರು ಉತ್ಸವದ ಕರಪತ್ರಗಳನ್ನು ಮನೆಮನೆಗೆ ತಲುಪಿಸಿ ಪ್ರಚಾರ ನೀಡಲು ಡಿಹೆಚ್ಓ ಡಾ.ಸುರೇಂದ್ರ ಬಾಬು ಸೂಚನೆ

ರಾಯಚೂರು ಜನವರಿ 30–

ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ನಡೆಸಬೇಕಿದೆ. ಈ ಕಾರ್ಯಕ್ರಮದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ದಿಶೆಯಲ್ಲಿ ಆರೋಗ್ಯ ಇಲಾಖೆಯ ಕ್ಷೇತ್ರ ಸಿಬ್ಬಂದಿಯು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಮನೆಮನೆಗೆ ತೆರಳಿ ಉತ್ಸವದ ಕರಪತ್ರ ನೀಡಿ ಮಾಹಿತಿ ನೀಡುವಂತೆ ಉತ್ಸವದ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಸಮನ್ವಯಾಧಿಕಾರಿ ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಹೇಳಿದರು.



ಜನವರಿ 29ರ ಗುರುವಾರ ನಗರ ಡಿಹೆಚ್ಓ ಕಚೇರಿಯಲ್ಲಿ ಜಿಲ್ಲೆಯ ತಾಲೂಕು ಆರೋಗ್ಯಾಧಿಕಾರಿಗಳು ಹಗೂ ವೈದ್ಯಾಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಐತಿಹಾಸಿಕ ನಾಡು ರಾಯಚೂರಿನಲ್ಲಿ ಬಹುದಿನಗಳ ನಂತರ ಜರುಗುತ್ತಿರುವ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮವು ಮೂರು ದಿನಗಳ ಕಾಲ ನಡೆಯಲಿದ್ದು, ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆಗೆ ಸೂಚನೆ ನೀಡಿದ್ದಾರೆ. ಜನರ ಉತ್ಸವವನ್ನು ಇಮ್ಮಡಿಗೊಳಿಸುವ ದಿಶೆಯಲ್ಲಿ ಹಮ್ಮಿಕೊಂಡ ಎಲ್ಲ

3ನೇ ಪುಟಕ್ಕೆ

ಜನವರಿ 30ರವರೆಗೆ 4,967 ಅಭ್ಯರ್ಥಿಗಳು ನೋಂದಣಿ ರಾಯಚೂರು ಉತ್ಸವ ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಸಿದ್ಧತೆಗೆ ಸೂಚನೆ

ರಾಯಚೂರು ಜನವರಿ 30–

ರಾಯಚೂರು ಜಿಲ್ಲಾ ಉತ್ಸವ-2026ರ ಹಿನ್ನೆಲೆಯಲ್ಲಿ ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎಸ್, ಡಿಡಿಯು-ಜಿಕೆವೈ ಯೋಜನೆಯಡಿ ಜಿಲ್ಲಾ ಮಟ್ಟದದಲ್ಲಿ ಒಂದು ದಿನದ ಉದ್ಯೋಗ ಮೇಳವನ್ನು ಫೆ.06ರಂದು ನಗರದ ಕೃಷಿ ವಿವಿಯ ಆವರಣದಲ್ಲಿ ಆಯೋಜಿಸಲಾಗಿದೆ. ಈ ಮೇಳದ ಯಶಸ್ವಿಗಾಗಿ ಸಂಬಧಿಸಿದ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಅವರು ಹೇಳಿದರು.



ಜನವರಿ 30ರ ಶುಕ್ರವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೇಳಯುವ ಅಂದು ಬೆಳಿಗ್ಗೆ 9 ಗಂಟೆಗೆ ಚಾಲನೆ ದೊರೆಯಲಿದೆ. ವೇದಿಕೆಯ ಸುತ್ತಲೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕೈಗೊಳ್ಳಬೇಕು. ಮೇಳದಲ್ಲಿ ಎಸ್‌ಎಸ್‌ಎಲ್‌ಸಿಯಿಂದ ಮೊದಲುಗೊಂಡು ಪಿಯುಸಿ, ಸಾಮಾನ್ಯ ಪದವಿ, ಡಿಪ್ಲೊಮಾ, ಐಟಿಐ, ಎಂಜಿನಿಯರಿಗ್, ನರ್ಸಿಂಗ್ ಸೇರಿದಂತೆ ವಿವಿಧ ಅರೆ ವೈದ್ಯಕೀಯ ಕೋರ್ಸ್ಗಳನ್ನು ಕಲಿತವರಿಗೆ ಉದ್ಯೋಗಾವಕಾಶ ಕಲ್ಪಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ. ಸಾವಿರಾರೂ ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ. ಮೇಳದಲ್ಲಿ ನೂರಾರು ಉದ್ಯೋಗದಾತರು (ಕಂಪೆನಿಗಳು) ಭಾಗವಹಿಸಲಿದ್ದು, ಈಗಾಗಲೇ ನೋಂದಣಿ ಮಾಡಿಸಿದ್ದಾರೆ. ಅವರ ಸಂಖ್ಯೆ ಇನ್ನೂ ಹೆಚ್ಚಳವಾಗಬಹುದು ಎಂದರು.

ಜನವರಿ 30ರ ಗುರುವಾರ ಬೆಳಿಗ್ಗೆ 10 ಗಂಟೆಗೆ ಸುಮಾರಿಗೆ 4,967 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಇನ್ನು ನೋಂದಣೆ ಪ್ರಕ್ರಿಯೆ ಹೆಚ್ಚಳವಾಗಲಿದೆ. ಮೇಳದಲ್ಲಿ ಆಯ್ಕೆಯಾದವರಿಗೆ ಸ್ಥಳದಲ್ಲಿಯೇ ಆಫರ್ ಲೆಟರ್ ಕೊಡಲಿದ್ದಾರೆ ಎಂದರು.

ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಉದ್ಯೋಗಾಕಾಂಕ್ಷಿಗಳು ಜಾಲತಾಣ :/ /.. ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡು ಭಾಗವಹಿಸಬಹುದಾಗಿರುತ್ತದೆ. ಹಾಗೂ ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಉದ್ಯೋಗದಾತರು/ಕಂಪನಿಗಳು ಸಹ ತಮ್ಮಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳ ವಿವರಗಳೊಂದಿಗೆ ://../ ಈ ಜಾಲತಾಣದಲ್ಲಿ ನೋಂದಾಯಿಸಿಕೊಡು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಈ ಬಗ್ಗೆ ಇನ್ನೂ ಹೆಚ್ಚಿನ ಪ್ರಚಾರ ನೀಡಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ

3ನೇ ಪುಟಕ್ಕೆ

ವಿವಿಧೆಡೆ ಚೆಕ್‌ಪೋಸ್ಟ್ ಸ್ಥಾಪನೆಗೆ ವಿಶೇಷ ಸೂಚನೆ ಪೊಲೀಸ್ ಕಣ್ಗಾವಲಿಗೆ ಎಸ್ಪಿ ಅರುಣಾಂಗ್ಷು ನಿರ್ದೇಶನ ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಖಡಕ್ ಸೂಚನೆ

ರಾಯಚೂರು ಜ.30–

ದೇವದುರ್ಗ, ಸಿರವಾರ, ಮಾನವಿ, ಸಿಂಧನೂರ ಮತ್ತು ಲಿಂಗಸೂರ ತಾಲೂಕು ಸೇರಿದಂತೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಅನಧೀಕೃತವಾಗಿ ಮರಳು ಸಾಗಣೆ ಕೂಡಲೇ ನಿಲ್ಲಬೇಕು. ಯಾವುದೇ ಕಡೆಗಳಲ್ಲಿ ರಾಜಾರೋಷವಾಗಿ ಮರಳು ಎತ್ತುವುದು ಕಂಡು ಬಂದಲ್ಲಿ ಅದನ್ನು ಸಹಿಸಲಾಗುವುದಿಲ್ಲ. ಅವರು ಎಷ್ಟೇ ಪ್ರಭಾವಿಗಳಾಗಿರಲಿ, ಯಾರೇ ಇರಲಿ ಅಂತವರ ಮೇಲೆ ಮುಲಾಜಿಲ್ಲದೇ ಕ್ರಮ ಜರುಗಿಸಲು ಹಿಂದೆ ಮುಂದೆ ನೋಡುವುದಿಲ್ಲ ಎಂದು ಜಿಲ್ಲಾ ಟಾಸ್ಕ್‌ಫೋರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಡಕ್ ಎಚ್ಚರಿಕೆ ನೀಡಿದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 30ರಂದು ನಡೆದ ಜಿಲ್ಲಾ ಟಾಸ್ಕ್‌ಫೋರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ



ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆಯ ದೇವದುರ್ಗ, ಮಾನವಿ ಸೇರಿದಂತೆ ಇನ್ನಿತರ ಕಡೆ ಅನಧೀಕೃತ ಮರಳು ಸಾಗಣೆ ಅವ್ಯಾಹತ ನಡೆಯುತ್ತಿದ್ದು, ಇದಕ್ಕೆ ಬ್ರೇಕ್ ಹಾಕಲು ಅಧಿಕಾರಿಗಳು ಕ್ರಮ ವಹಿಸಬೇಕು ಎನ್ನುವ ವಿಷಯವು ಕೆಡಿಪಿ ಸಭೆ ಮತ್ತು ಇನ್ನಿತರ ಸಭೆಗಳಲ್ಲಿ ಮತ್ತೆ ಮತ್ತೆ ಚರ್ಚೆಗೆ ಬರುತ್ತಿದೆ. ಈ ವಿಷಯವನ್ನು ಜಿಲ್ಲಾಡಳಿತವು ಗಂಭೀರವಾಗಿ ಪರಿಗಣಿಸಿದೆ. ಈ ಲ್ಯಾಂಡ್ ಮಾಫಿಯಾದಲ್ಲಿ ಯಾವುದೇ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಕೂಡದು. ಈ ಅಕ್ರಮ ಮರಳು ದಂಧೆಯಲ್ಲಿ ಭಾಗಿಯಾಗಿ, ಅಧಿಕಾರಿಗಳು ಮತ್ತು ಸಿಬ್ಬಂದಿಯು ನೋಡಿಯೂ ನೋಡದಂತೆ ಇದ್ದರೆ, ಅಕ್ರಮ ಮರಳು ದಂಧೆಗೆ ಕುಮ್ಮಕ್ಕು ನೀಡಿದರೆ ಸಹಾಯಕ ಆಯುಕ್ತರು, ಪೊಲೀಸ್ ಉಪಾಧೀಕ್ಷಕರು, ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಪಿಡಿಓ ಯಾರೇ ಇರಲಿ ಅಂತಹ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಮಾನತುಗೊಳಿಸಲು ಕೂಡಲೇ ಶಿಫಾರಸ್ಸು ಮಾಡಲಾಗುವುದು. ಪ್ರಕರಣವು ಗಂಭೀರವಾಗಿದ್ದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆಯೇ ಎಫ್‌ಐಆರ್ ದಾಖಲಿಸಿ ಶಾಶ್ವತವಾಗಿ ಮನೆಗೆ ಕಳುಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ವಿಶೇಷ ಕಾರ್ಯಾಚರಣೆಗೆ ಸೂಚನೆ: ಅಕ್ರಮ ಮರಳು ಸಾಗಣೆಗೆ ಬ್ರೇಕ್ ಹಾಕಬೇಕು ಎಂಬುದು ದೇವದುರ್ಗ ಸಿಟಿ ಜನರು ಹಾಗೂ ಆ ತಾಲೂಕಿನ 48 ಹಳ್ಳಿಗಳ ಒಕ್ಕೋರಲಿನ ಮನವಿ ಮತ್ತು

3ನೇ ಪುಟಕ್ಕೆ

ಫೆ.1ರಂದು ರಾಯಚೂರು ಜಿಲ್ಲೆಯಲ್ಲಿ ಮುಖ್ಯಮಂತ್ರಿಗಳಾದ ಸಿಎಂ ಪ್ರವಾಸ

ರಾಯಚೂರು ಜನವರಿ 30–

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಫೆಬ್ರವರಿ 01 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನಿದ ವಿಶೇಷ ವಿಮಾನದ ಮೂಲಕ ಹೊರಟು 11 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಅಲ್ಲಿಂದ 11.10ಕ್ಕೆ ಹೆಲಿಕ್ಯಾಪ್ಟರ್ ಮೂಲಕ ಹೊರಟು 11.40ಕ್ಕೆ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಬಂಡೊಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹೆಲಿಪ್ಯಾಡ್ ಗೆ ಆಗಮಿಸಿ, ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದ ಕನಕ ಗುರುಪೀಠದ ಶಾಖಾ ಮಠದಿಂದ ನಡೆಯುವ ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ಮಧ್ಯಾಹ್ನ 3.30ಕ್ಕೆ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದಿದ ನಿರ್ಗಮಿಸಿ ಸುರಪುರ ತಾಲೂಕಿನ ಬಂಡೊಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹತ್ತಿರದ ಹೆಲಿಪ್ಯಾಡನಿಂದ ನಿರ್ಗಮಿಸಿ ಕಲಬುರಗಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.01ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ರಾಯಚೂರು ಜ.30 –

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಫೆ.01ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅದು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರೊಂದಿಗೆ ವಿಶೇಷ ವಿಮಾನದ ಮೂಲಕ ಬೆಂಗಳೂರಿನಿದ ಹೊರಟು ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದಿಂದ ಆಯೋಜಿಸಿರುವ ಬ್ರಹ್ಮಲೀನರಾದ ಪರಮಪೂಜ್ಯ

3ನೇ ಪುಟಕ್ಕೆ

ಅಂಗಡಿಗಳ ಮೇಲೆ ಅಧಿಕಾರಿಗಳ ದಾಳಿ; ಅಕ್ರಮವಾಗಿ ಸಂಗ್ರಹಿಸಿದ್ದ ಪ್ಲಾಸ್ಟಿಕ್ ವಶಕ್ಕೆ



ಸುರಪುರ,ಜ.30-

ನಗರದ ರಂಗಂಪೇಟೆ ಸುರಪುರ ವಿವಿಧ ಕಡೆಗಳಲ್ಲಿ ನಗರಸಭೆಯ ಅಧಿಕಾರಿಗಳು ದಾಳಿ ನಡೆಸಿ ಅಂಗಡಿಗಳಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಪ್ಲಾಸ್ಟಿಕ್ ವಶಪಡಿಸಿಕೊಂಡು ನೋಟಿ ಸ್ ನೀಡಿರುವ ಘಟನೆ ನಡೆದಿದೆ. ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತ ಬಸವರಾಜ ಟಣಕೆದಾರ ಮಾತನಾಡಿ, ಪ್ಲಾಸ್ಟಿಕ್ ಇಡೀ ಪರಿಸರವನ್ನು ಹಾಳು ಮಾಡಲಿದ್ದು ಯಾರೂ ಕೂಡ ಪ್ಲಾಸ್ಟಿಕನ್ನು ಬಳಕೆ ಮಾಡದೆ ಬಟ್ಟೆ ಚೀಲಗಳನ್ನು ಬಳಕೆ ಮಾಡುವಂತೆ ತಿಳಿಸಿದರು. ಈಗಾಗಲೇ ಸರ್ಕಾರವೇ ಪ್ಲಾಸ್ಟಿಕ್ ಬ್ಯಾನ್ ಮಾಡಿ ನಿರಂತರವಾಗಿ ಜಾಗೃತಿಯ ಮೂಡಿಸಲಾಗುತ್ತಿದೆ ಆದರೂ ಕೂಡ ಅಕ್ರಮವಾಗಿ ಪ್ಲಾಸ್ಟಿಕ್ ಗಳನ್ನು ಸಂಗ್ರಹಿಸಿ ಇಟ್ಟುಕೊಂಡು ತಮ್ಮ ವ್ಯಾಪಾರಕ್ಕೆ ಬಳಕೆ ಮಾಡುತ್ತಿರುವುದು ತುಂಬಾ ಬೇಸರದ ಸಂಗತಿಯಾಗಿದೆ ಎಂದು ವ್ಯಾಪಾರಸ್ಥರ ಮೇಲೆ ಅಸಮಾ ಧಾನ ವ್ಯಕ್ತಪಡಿಸಿದ್ದಾರೆ. ಒಂದು ಪ್ಲಾಸ್ಟಿಕ್ ಮಣ್ಣಿನಲ್ಲಿ ಸೇರಿಕೊಂಡರೆ ಎಷ್ಟು ವರ್ಷಗಳಾದರೂ ಕೊಳೆಯದೆ ಹಾಗೆ ಉಳಿದುಕೊಂಡು ಮಣ್ಣನ್ನು ಕೂಡ ಹಾಳುಮಾಡುತ್ತದೆ ಅಲ್ಲದೆ ಪ್ಲಾಸ್ಟಿಕ್ ನಲ್ಲಿ ಬಿಸಿಯ ಪದಾರ್ಥಗಳನ್ನು ಹಾಕುವುದರಿಂದ ಅಂತಹ ಪದಾರ್ಥ ಸೇವನೆಯಿಂದ ಕ್ಯಾನ್ಸರ್ ಕೂಡ ಬರುತ್ತದೆ. ಆದ್ದರಿಂದ ಸಾರ್ವಜನಿಕರು ಪ್ಲಾಸ್ಟಿಕ್ ಬಗ್ಗೆ ತುಂಬಾ ಜಾಗೃತಿ ವಹಿಸಬೇಕಾಗಿದೆ. ನಾವು ಕೂಡ ನಿರಂತರವಾಗಿ ಜಾಗೃತಿ ಮೂಡಿಸು ತ್ತಿದ್ದರು ವ್ಯಾಪಾರಸ್ಥರು ಅನಧಿಕೃತವಾಗಿ ಪ್ಲಾಸ್ಟಿಕ್ ಇಟ್ಟು ಕೊಂಡು ಗ್ರಾಹಕರಿಗೆ ನೀಡುವುದು ಕಾನೂನು ಬಾಹಿರವಾಗಲಿದೆ. ಈಗ ಎಚ್ಚರಿಕೆ ನೀಡುತ್ತಿದ್ದು ಮತ್ತೊಮ್ಮೆ ಪ್ಲಾಸ್ಟಿಕ್ ಇರುವುದು ಕಂಡುಬಂದಲ್ಲಿ ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳ ಲಾಗುವುದು ಎಂದು ಎಚ್ಚರಿಸಿದರು.

ಪಟ್ಟಣದ ರಂಗಂಪೇಟೆಯ ಅನೇಕ ಅಂಗಡಿಗಳ ಮೇಲೆ ದಾಳಿ ನಡೆಸಿ ಪ್ಲಾಸ್ಟಿಕ್ ವಶಪಡಿಸಿಕೊಂಡು ನಂತರ ಸುರಪುರ ನಗರದ ಮಹಾತ್ಮ ಗಾಂಧಿ ವೃತ್ತ, ದರ್ಬಾರ್ ರಸ್ತೆಯ ಅಂಗಡಿಗಳಲ್ಲಿ ಪ್ಲಾಸ್ಟಿಕ್ ವಶಪಡಿಸಿ ಕೊಂಡು ನೋಟಿಸ್ ನೀಡಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ನಗರಸಭೆ ವ್ಯವಸ್ಥಾಪಕ ಯಲ್ಲಪ್ಪ ನಾಯಕ, ಸಿಬ್ಬಂದಿಗಳಾದ ಗುರುಸ್ವಾಮಿ, ಮೈನುದ್ದೀನ್, ದುರ್ಗಪ್ಪ, ಹಣಮಂತ ರಾಯ ಸೇರಿದಂತೆ ಕಾರ್ಮಿಕರು ಕೂಡ ಭಾಗವಹಿಸಿದ್ದರು.

ಕಾಂಗ್ರೆಸ್ಸಿನಿಂದ ಅರ್ಹ ಮತದಾರರ ಹಕ್ಕನ್ನು ಕಸಿಯುವ ಹುನ್ನಾರ: ರಾಜು ನಾಯ್ಕರ

ಬಾಗಲಕೋಟೆ,ಜ.29-

ಭಾರತದ ಸಂವಿಧಾನಾತ್ಮಕವಾಗಿ ಮತ್ತು ಚುನಾವಣಾ ಆಯೋಗ ನೀಡಿರುವ ಸಂವಿಧಾನಾತ್ಮಕ ಹಕ್ಕಿನಂತೆ ತಾನು ವಾಸಿಸುವ ಸ್ಥಳದಲ್ಲಿ ಮತದಾನ ಪಟ್ಟಿಯಲ್ಲಿ ಸೇರಿಸುವುದು ಅವರ ಹಕ್ಕು, ಇಂಥಹ ಅರ್ಹ ಮತದಾರರ ಬಗ್ಗೆ ಮಾತನಾಡುವುದು ಅವರಿಗೆ ಮಾಡಿದ ಅಪಮಾನ, ಅರ್ಹ ಮತ ದಾರರನ್ನು ಅವರ ಹಕ್ಕಿನಿಂದ ವಂಚಿಸುವ ಕುತಂತ್ರ ಕಾಂಗ್ರೆಸ್ ಮಾಡುತ್ತಿದೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ ಹೇಳಿದ್ದಾರೆ.

ಕಾಂಗ್ರೆಸ್ ಸರಕಾರ ತನ್ನ ಆಡಳಿತ ವೈಫಲ್ಯ ಮುಚ್ಚಿಕೊಳ್ಳಲು ಅಕ್ರಮ ಎಂಬ ಪದ ಬಳಸುವ ಮೂಲಕ ಅರ್ಹ ಮತದಾರರನ್ನು ಅಪಮಾನಿಸುತ್ತಿದೆ, ಜಿಲ್ಲೆಯಲ್ಲಿ ಉನ್ನತ ಶಿಕ್ಷಣ ಪಡೆಯು ವುದಕ್ಕಾಗಿ ಭಾರತ ವಿವಿಧ ರಾಜ್ಯ ಗಳಿಂದ ಬಂದಿರುವ ವಿದ್ಯಾರ್ಥಿಗಳು ಜಿಲ್ಲೆಯ ವಿವಿಧ ಶಿಕ್ಷಣ ಸಂಘ ಸಂಸ್ಥೆಗಳಲ್ಲಿ ಓದುವ ಜೊತೆಗೆ ಇಲ್ಲಿಯೇ ವಾಸವಾಗಿದ್ದಾರೆ, ತಾವು ವಾಸವಾಗಿರುವ ಪ್ರದೇಶದಲ್ಲಿ ಮತದಾನ ಮಾಡಲು ತಮ್ಮ ಹೆಸರನ್ನು ಸೇರಿಸಿಕೊಳ್ಳುವುದು ಅವರ ಹಕ್ಕು, ಇಂಥ ವಿದ್ಯಾರ್ಥಿಗಳ ಮತದಾನದ ಹಕ್ಕು ಕಸಿಯುವುದಕ್ಕಾಗಿ ಕಾಂಗ್ರೆಸ್ಸ ಹುನ್ನಾರ ನಡೆಸುತ್ತಿದೆ, ಅರ್ಹ ಮತದಾರರಗೆ ವಂಚನೆಯಾದಲ್ಲಿ ತೀರ್ವಗತಿಯಲ್ಲಿ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಐಟಿಯುಸಿಯಿಂದ ಅನಂತ ಸುಬ್ಬರಾವ್ ಅವರಿಗೆ ಶ್ರದ್ಧಾಂಜಲಿ ಸಭೆ

ದುಡಿಯುವ ವರ್ಗಕ್ಕೆ ತಮ್ಮ ಬದುಕನ್ನೇ ಪಣವಾಗಿಟ್ಟ ಅನಂತ್ ಸುಬ್ಬರಾವ್



ಸಿಂಧನೂರು,ಜ.30-

ದುಡಿಯುವ ವರ್ಗದ ಹಿತಾಸಕ್ತಿಗಾಗಿ ತಮ್ಮ ಬದುಕನ್ನೇ ಪಣವಾಗಿಟ್ಟು ಹಲವಾರು ಬಾರಿ ಜೈಲು ವಾಸವನ್ನು ಅನುಭವಿಸಿದ ಎಚ್.ವಿ.ಅನಂತ ಸುಬ್ಬರಾವ್ ಅವರ ಬದ್ಧತೆ ಪ್ರಶ್ನಾತೀತವಾದದ್ದು ಎಂದು ಎಐಟಿಯುಸಿ ಜಿಲ್ಲಾ ಘಟಕದ ಅಧ್ಯಕ್ಷ ಬಾಷುಮಿಯ ಹೇಳಿದರು.

ನಗರದ ಎಪಿಎಂಸಿಯ ಶ್ರಮಿಕ ಭವನದಲ್ಲಿ ಆಲ್ ಇಂಡಿಯಾ ಟ್ರೇಡ್ ಯೂನಿಯನ್ ಕಾಂಗ್ರೆಸ್ ತಾಲ್ಲೂಕು ಘಟಕದಿಂದ ಗುರುವಾರ ಹಮ್ಮಿ ಕೊಂಡಿದ್ದ ಕಾರ್ಮಿಕ ಮುಖಂಡ ಅನಂತ ಸುಬ್ಬರಾವ್ ಅವರಿಗೆ ಶ್ರದ್ಧಾಂಜಲಿ ಸಭೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಎಚ್.ವಿ. ಅನಂತ ಸುಬ್ಬರಾವ್ ಅವರು ರಾಜಿರಹಿತ ಹೋರಾಟದಿಂದ ಅಸಂಘಟಿತ ಮತ್ತು ಸಂಘಟಿತ ಕಾರ್ಮಿಕರಲ್ಲಿ ಸ್ವಾಭಿಮಾನ ಬಿತ್ತಿದ ಮಹಾನ್ ನಾಯಕರು. ಕೆಎಸ್ಆರ್‌ಟಿಸಿ, ಹಟ್ಟಿಚಿನ್ನದ ಗಣಿ, ಅಂಗನವಾಡಿ ನೌಕರರು ಸೇರಿದಂತೆ ಹಲವು ಶ್ರಮಿಕ ವರ್ಗಗಳಲ್ಲಿ ಟ್ರೇಡ್ ಯೂನಿಯನ್ ಗಳನ್ನು ಕಟ್ಟಿ ಅವರಿಗೆ ಸವಿಂದಾನ ಬದ್ಧವಾದ ಹಕ್ಕುಗಳನ್ನು ಕೊಡಿಸುವಲ್ಲಿ ಹಗಲಿರುಳು ಶ್ರಮಿ ಸುತ್ತಿದ್ದರು.


ಕರ್ನಾಟಕದ ಉದ್ದಗಲ ಕ್ಕೂ ಸಂಚರಿಸಿ ಕಾರ್ಮಿಕ ಸಂಘಗಳನ್ನು ಕಟ್ಟಿ ಅವರಿಗೆ ಕಾನೂನುಗಳನ್ನು ಕಲಿಸುವ ಮೂಲಕ ಅವರಲ್ಲಿ ಜಾಗೃತಿ ಮೂಡಿಸಿದ ಶ್ರೇಯಸ್ಸು ಅನಂತ ಸುಬ್ಬರಾವ್ ಅವರಿಗೆ ಸಲ್ಲುತ್ತದೆ ಎಂದು ವಿವರಿಸಿದರು.

ಸಮುದಾಯ ಸಂಘಟನೆಯ ರಾಜ್ಯ ಘಟಕದ ಕಾರ್ಯದರ್ಶಿ ಎಸ್.ದೇವೇಂದ್ರಗೌಡ ಮಾತನಾಡಿ, ಎಚ್.ವಿ.ಅನಂತ ಸುಬ್ಬರಾವ್ ಅವರು ಸಹಸ್ರಾರು ವಿದ್ಯಾರ್ಥಿ- ಯುವಜನರಿಗೆ ಆದರ್ಶ ಪ್ರಾಯ ರಾಗಿದ್ದಾರೆ.

ಅವರ ಸರಳತೆ, ತ್ಯಾಗ, ಜಾತ್ಯಾತೀತ ಮನೋಭಾವ ಇತರರಿಗೆ ಅನುಕರಣೀಯ ಎಂದರು.

ಮುಖಂಡರಾದ ಬಿ.ಲಿಂಗಪ್ಪ, ಗೋಪಾಲಕೃಷ್ಣ, ಮನುಜಮತ ಬಳಗದ ಪ್ರಧಾನ ಕಾರ್ಯದರ್ಶಿ ಬಸವರಾಜ ಬಾದರ್ಲಿ, ಉಪನ್ಯಾಸಕ ಶಂಕರ್ ಗುರಿಕಾರ್, ಕೆಆರ್‌ಎಸ್ ಮುಖಂಡ ಚಿಟ್ಟಿಬಾಬು, ಅಂಗನ ವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಫೆಡರೇಶನ್‌ನ ಶಾಂತಾ ಗೋರೇಬಾಳ, ಯಮುನಮ್ಮ ಮಾತನಾಡಿದರು. ರೇಣುಕಾ ಕ್ರಾಂತಿಗೀತೆ ಹಾಡಿದರು. ಮಾತನಾಡಿ ದರು. ಹಮಾಲರ ಸಂಘದ ಮುಖಂ ಡರಾದ ಹನುಮಂತಪ್ಪ ಹಂಚಿನಾಳ, ಪ್ರಕಾಶ್, ಮುಕ್ತಂಸಾಬ್, ಗಂಗಪ್ಪ, ಅಂಗನವಾಡಿ ಫೆಡರೇಷನ್ ಮುಖಂಡರಾದ ರತ್ನಾ ದೇವರಗುಡಿ, ಶರಣಮ್ಮ, ಆದಿಲಕ್ಷ್ಮಿ, ಸುನೀತಾ ಉಪಸ್ಥಿತರಿದ್ದರು.

ಸಂಸ್ಕಾರ ಸಂಸ್ಕೃತಿ ಪರಿಪಾಲನೆಯಿಂದ ಬಾಳು ಉಜ್ವಲ- ಶ್ರೀ ರಂಭಾಪುರಿ ಜಗದ್ಗುರುಗಳು



ಆಲೂರು,ಜ.30-

ಭಾರತೀಯ ಸಂಸ್ಕೃತಿ ಉತ್ಕೃಷ್ಟವಾದುದು. ಬದುಕಿ ಬಾಳುವ ಮನುಷ್ಯನಿಗೆ ಸಂಸ್ಕಾರ ಮತ್ತು ಉತ್ತಮ ವಿಚಾರಗಳ ಚಿಂತನ ಅವಶ್ಯಕತೆವಾಗಿದೆ. ಸಂಸ್ಕಾರ ಮತ್ತು ಸಂಸ್ಕೃತಿ ಪರಿಪಾಲನೆಯಿಂದ ಮಾನವನ ಬಾಳು ಉಜ್ವಲಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಸಿಂಧುವಳ್ಳಿ ಶ್ರೀ ವೀರಭದ್ರೇಶ್ವರ ನೂತನ ಶಿಲಾ ದೇವಸ್ಥಾನದ ಉದ್ಘಾಟನೆ-ಪ್ರಾಣ ಪ್ರತಿಷ್ಠಾಪನೆ- ಕಳಸಾರೋಹಣ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಗಲು ಸೂರ್ಯ ರಾತ್ರಿ ಚಂದ್ರ ಬೆಳಕನ್ನು ನೀಡಬಲ್ಲರು. ಆದರೆ ಧರ್ಮ ಸರ್ವಕಾಲಕ್ಕೂ ಸರ್ವಸಮುದಾಯಕ್ಕೂ ಬೆಳಕಿನ ದಾರಿ ತೋರಬಲ್ಲದು. ಧರ್ಮವೆಂದರೆ ಆಡುವ ಮಾತು ಅಲ್ಲ. ಆಡಿದ ಮಾತಿನಂತೆ ನಡೆಯುವುದೇ ನಿಜವಾದ ಧರ್ಮ. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ವೀರಶೈವ ಧರ್ಮವನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಭೂಮಂಡಲ ದಲ್ಲಿ ಸ್ಥಾಪಿಸಿ ಸಕಲರನ್ನು ಉದ್ಧರಿಸಿ ದ್ದಾರೆ. ಅವರ ತತ್ವ ಸಂದೇಶಗಳು ಮತ್ತು ವಿಚಾರಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿ ದೀಪ. ಶ್ರೀ ಜಗದ್ಗುರು ರಂಭಾಪುರಿ ಪೀಠದ ಕ್ಷೇತ್ರನಾಥನಾಗಿ ಪೂಜೆಗೊಳ್ಳುವ ಶ್ರೀ ವೀರಭದ್ರಸ್ವಾಮಿ ಸಿಂಧುವಳ್ಳಿಯಲ್ಲಿ ನೆಲೆಗೊಂಡಿರುವುದು ತಮ್ಮೆಲ್ಲರ ಸೌಭಾಗ್ಯವೇ ಆಗಿದೆ. ಅತ್ಯಂತ ಭವ್ಯವಾಗಿ ಸುಂದರವಾಗಿ ನಿರ್ಮಾಣಗೊಂಡಂತ ಶ್ರೀ ವೀರಭದ್ರೇಶ್ವರ ದೇವಾಲಯ ಭಕ್ತರ ಬಾಳಿಗೆ ಆಶಾಕಿರಣವಾಗಿದೆ. ದುಷ್ಟರ ಸಂಹಾರ ಮತ್ತು ಶಿಷ್ಟರ ಸಂರಕ್ಷಣೆಗಾಗಿ ಅವತರಿಸಿದ ಶಕ್ತಿಯೇ ಶ್ರೀ ವೀರಭದ್ರ ಸ್ವಾಮಿ. ಆತನ ಕೃಪಾ ಕಾರುಣ್ಯ ಸಕಲರ ಮೇಲೆ ಅನವರತಕಾಲ ಇರಲಿ ಎಂದು ಶುಭ ಹಾರೈಸಿದರು.

ಪವಿತ್ರ ಧರ್ಮ ಸಮಾರಂಭವನ್ನು ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ಸಿದ್ದೇಶ ನಾಗೇಂದ್ರ ಮತ್ತು ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಸಂಯುಕ್ತವಾಗಿ ಉದ್ಘಾಟಿಸಿ ಸಿಂಧುವಳ್ಳಿ ಗ್ರಾಮಸ್ಥರ ಅದ್ಭುತ ಸಾಧನೆಯನ್ನು ಕಂಡು ಹರುಷ ವ್ಯಕ್ತಪಡಿಸಿದರು. ವಾಗ್ಮಿ ಕುಮಾರಿ ಹಾರಿಕಾ ಮಂಜುನಾಥ್ ಮಾತನಾಡಿ ಭಾರತೀಯ ಹಿಂದೂ ಸಂಸ್ಕೃತಿಯಲ್ಲಿ ಏನೆಲ್ಲ ಆಧ್ಯಾತ್ಮ ಸಂಪತ್ತು ಅಡಗಿದೆ. ಅದನ್ನು ಅರಿಯುವ ಮತ್ತು ಆಚರಣೆಯಲ್ಲಿ ತರಲು ಪ್ರಾಮಾಣಿಕ ಪ್ರಯತ್ನ ಎಲ್ಲರೂ ಮಾಡಬೇಕಾಗಿದೆ. ವೈಚಾರಿಕತೆ ಮತ್ತು ಆಧುನಿಕತೆ ಹೆಸರಿನಲ್ಲಿ ಸಂಸ್ಕೃತಿ ಸಭ್ಯತೆ ನಾಶವಾಗಬಾರದು. ಪ್ರತಿಯೊಬ್ಬರಲ್ಲಿ ಹಿಂದೂ ಸಂಸ್ಕೃತಿಯ ಆದರ್ಶ ಮೌಲ್ಯಗಳನ್ನು ಉಳಿಸಿ ಬೆಳೆಸುವ ಕಾರ್ಯ ಮಾಡಬೇಕೆಂದರು. ನೇತೃತ್ವ ವಹಿಸಿದ ಯಸಳೂರು ತೆಂಕಲಗೂಡು ಮಠದ ಚನ್ನಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಎಲ್ಲ ಧರ್ಮಗಳಲ್ಲಿ ಮಾನವೀಯ ಆದರ್ಶ ಮೌಲ್ಯಗಳು ಇರುತ್ತವೆ. ವೀರಶೈವ ಧರ್ಮದಲ್ಲಿ ಗಂಡು-ಹೆಣ್ಣು ಮೇಲು ಕೀಳು ಬಡವ ಶ್ರೀಮಂತ ಭೇದ ಭಾವವಿಲ್ಲದೆ ಎಲ್ಲರಿಗೂ ಸಮಾನ ಅವಕಾಶವನ್ನು ಒದಗಿಸಿಕೊಟ್ಟಿದೆ. ಶ್ರೀ ಜಗದ್ಗುರು ರೇಣುಕಾ ಚಾರ್ಯರ ವಿಚಾರಧಾರೆಗಳು ಅಂದು ಇಂದಿಗಷ್ಟೇ ಅಲ್ಲ ಎಂದೆಂದಿಗೂ ಎಲ್ಲರ ಬದುಕಿಗೆ ಆದರ್ಶ ದಾರಿ ತೋರಿಸಿದ್ದನ್ನು ಮರೆಯುವಂತಿಲ್ಲ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾ ಘಟಕದ ಅಧ್ಯಕ್ಷ ನವಿಲೇ ಪರಮೇಶ್ವರ, ಮಂಜಣ್ಣ, ಹರೀಶ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಧನ್ಯಶ್ರೀ ಪ್ರಾರ್ಥನೆಯೊಂದಿಗೆ ಭರತನಾಟ್ಯ ಅಭಿನಯಿಸಿದರು. ಶಿಕ್ಷಕ ಶಿವಕು ಮಾರ್ ನಿರೂಪಿಸಿದರು. ಸಮಾರಂ ಭಕ್ಕೂ ಮುನ್ನ ಗ್ರಾಮದ ಹೊರವಲ ಯದಿಂದ ಶ್ರೀ ವೀರಭದ್ರೇಶ್ವರ ದೇವಸ್ಥಾನದವರೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರು ಗಳವರನ್ನು ಸಾರೋಟ ಭವ್ಯ ಮೆರ ವಣಿಗೆ ಮೂಲಕ ಬರ ಮಾಡಿ ಕೊಂಡರು. ಮೆರವಣಿಗೆಯಲ್ಲಿ ಕುಂಭ ಹೊತ್ತ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು ವೀರಗಾಸೆಯ ಕಲಾವಿದರು ಪಾಲ್ಗೊಂಡಿದ್ದು ಉತ್ಸ ವಕ್ಕೆ ಶೋಭೆ ತಂದಿತು. ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

ಉತ್ತಮ ಸಂಸ್ಕೃತಿ ಉಳಿಸಿ ಬೆಳೆಸಿದಲ್ಲಿ ನೆಮ್ಮದಿಯ ಜೀವನ ನಡೆಸಲು ಸಾಧ್ಯ



ಕೆಂಭಾವಿ,ಜ.30-

ಉತ್ತಮ ಸಂಸ್ಕೃತಿ ಹಾಗೂ ಸಂಸ್ಕಾರ ಉಳಿಸಿ ಬೆಳೆಸಿದಲ್ಲಿ ನಮ್ಮ ಮುಂದಿನ ತಲೆಮಾರುಗಳು ನೆಮ್ಮದಿಯಿಂದ ಜೀವನ ಮಾಡಲು ಸಾಧ್ಯ ಎಂದು ಡಿಸಿಸಿ ಬ್ಯಾಂಕ್ ನಿರ್ದೇಶಕ ಸುರೇಶ ಸಜ್ಜನ ಹೇಳಿದರು.

ಪಟ್ಟಣದ ಸಮೀಪ ಮುದನೂರ ಗ್ರಾಮದ ಶ್ರೀ ಕಂಠಿ ಕೋರಿಸಿದ್ದೇಶ್ವರ ಶಾಖಾಮಠದಲ್ಲಿ ಜರುಗಿದ ಶ್ರೀ ಕಂಠಿ ಹನುಮಂತ ದೇವರ 28 ನೆ ಜಾತ್ರಾ ಮಹೋತ್ಸವ, ಸದ್ಗುರು ಶ್ರೀ ಕೋರಿಸಿ ದ್ದೇಶ್ವರರ ಪಲ್ಲಕ್ಕಿ ಉತ್ಸವ, ಶ್ರೀ ಮಠದ ಪೂಜ್ಯರ ಪಟ್ಟಾಧಿಕಾರದ 8 ನೆ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ನಮ್ಮ ದೇಶದ ಸಂಸ್ಕೃತಿ ಹಾಗೂ ಸಂಸ್ಕಾರ ಹೆಚ್ಚಿಸಲು ದೇಶದ ಪ್ರಧಾನಿಯವರು ಹನ್ನೆರಡು ಜೋರ್ತಿಲಿಂಗಗಳನ್ನು ಅಭಿವೃದ್ಧಿ ಪಡಿಸಲು ಸತತವಾಗಿ ಪ್ರಯತ್ನಿಸುತ್ತಿ ದ್ದಾರೆ. ಅದೇ ರೀತಿಯಲ್ಲಿ ಕಂಠಿ ಶ್ರೀಗಳು ಸಹ ಈ ಭಾಗದಲ್ಲಿ ಅನೇಕ ಸತ್ಕಾರ್ಯಗಳನ್ನು ಮಾಡುತ್ತಾ ಜನರಿಗೆ ಉತ್ತಮ ಸಂದೇಶಗಳನ್ನು ನೀಡುತ್ತಿದ್ದಾರೆ. ಸಂತರ, ಶರಣರ ತ್ಯಾಗದ ಜೀವನ ನಮಗೆ ಮಾರ್ಗ ದರ್ಶಿಯಾಗಬೇಕು. ಋಷಿಗಳ, ಮಹಾನುಭಾವರ ತ್ಯಾಗವು ಭಾರತದ ತುಂಬ ಹರಡಿ ಜ್ಞಾನಪೂರ್ಣ ಗೊಳಿಸಿದೆ ಎಂದು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಷ.ಬ್ರ. ಸಿದ್ಧ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಇಳೆ ನಿಮ್ಮ ದಾನ, ಬೆಳೆ ನಿಮ್ಮ ದಾನ ಎಂದು ಶರಣರು ಎಲ್ಲವನ್ನು ಪರಮಾತ್ಮನಿಗೆ ಸಮರ್ಪಿಸಿದರು. ಜಗವ ಬೆಳಗುವ ದೀಪ ಉರಿಯಲು ಬತ್ತಿ, ಎಣ್ಣೆ ಎರಡೂ ಬೇಕು. ಹಾಗೆ ನಮ್ಮ ಜೀವ ಜ್ಯೋತಿ ಬೆಳಗಲು ಮಹಾತ್ಮರು, ಸಂತರು ನೀಡಿದ ಜ್ಞಾನದ ಮಾತುಗಳನ್ನು ಬಳಸಿಕೊಂಡು ಬೆಳಕಾಗಬೇಕು. ಸಾಮಾನ್ಯ ಪ್ರಪಂಚದಿಂದ ಅಸಾಮಾನ್ಯದೆಡೆಗೆ ಹೋಗಲು ಮನಸ್ಸನ್ನು ಮೇಲ್ಮುಖವಾಗಿ ಎತ್ತರಿಸುವುದು. ನಿಸರ್ಗದ ಮಧ್ಯದಲ್ಲಿಯೂ ತ್ಯಾಗ ಹರಡಿಕೊಂಡಿದೆ. ಗಿಡ, ಮರವಾಗಿ ಎತ್ತರ ಬೆಳೆದರೂ ಎಲೆಗಳು, ಹೂ, ಹಣ್ಣು ಗಳು ನೆಲಕ್ಕೆ ಬೀಳುತ್ತವೆ. ಅದುವೆ ಬೀಜವಾಗಿ ಮೊಳೆತು ಮತ್ತೆ ಎತ್ತರಕ್ಕೆ ಬೆಳೆಯುತ್ತದೆ. ಹೀಗೆ ಮಾನವ ತ್ಯಾಗ ಮಾಡಿದಾಗ ಉನ್ನತ ಹಂತ ತಲುಪುತ್ತಾನೆ. ಒಬ್ಬರ ತ್ಯಾಗ ಇನ್ನೊಬ್ಬರ ಪೋಷಣೆಯಾಗುತ್ತದೆ. ತ್ಯಾಗ ಮಾಡಿದ ಮನುಷ್ಯ ಒಂದಿಲ್ಲ ಒಂದು ದಿನ ಎತ್ತರಕ್ಕೆ ಏರುತ್ತಾನೆ. ಕಾಯ ಪ್ರಸಾದ, ಜೀವ ಪ್ರಸಾದ, ಭಾವ ಪ್ರಸಾದ ಎಂದ ಅಕ್ಕಮಹಾದೇವಿ, ತನ್ನ ಶರೀರ ತನ್ನದಲ್ಲ ಎಂದು ಬಾವಿಸಿದ್ದಳು. ಇದು ದೇವನ ಪ್ರಸಾದ ಎಂಬ ತ್ಯಾಗಭಾವ ಅವರದಾಗಿತ್ತು.

ಹೆಣ್ಣುಮಕ್ಕಳು ತನ್ನ ಬಂಧು, ಬಳಗ, ಹೆತ್ತವರ ತೊರೆದು ಬಂದರೂ ಹೊಸಬರ ಮಧ್ಯದಲ್ಲಿ ತ್ಯಾಗದಿಂದ ಜೀವನ ನಡೆಸುತ್ತಾರೆ. ತಮ್ಮ ಮನೆ ಬೆಳಗಲು ಹಗಲು-ರಾತ್ರಿ ಪರಿಶ್ರಮ ಪಡುವ ತಾಯಂದಿರೇ ಪರಮ ತ್ಯಾಗಿಗಳು. ಲೌಕಿಕದಲ್ಲೂ , ಪಾರಮಾರ್ಥದಲ್ಲೂ ತ್ಯಾಗ. ಇದೆಲ್ಲ ಭಗವಂತನದ್ದು, ನನ್ನದಲ್ಲ ಎಂಬ ಭಾವ ಇದ್ದಾಗ ಮಾತ್ರ ಪರಮ ಶಾಂತಿ ಅನುಭವಿಸಲು ಸಾಧ್ಯ ಎಂದು ನುಡಿದರು.

ಪ್ರಮುಖರಾದ ದೇವು ಮುದನೂರ, ಬಸವರಾಜ ಮೇಲಿನಮನಿ, ಬಸವರಾಜ ಸಜ್ಜನ, ನಾಗಯ್ಯ ಸ್ವಾಮಿ ಹುಣಸಗಿ ಮಾತನಾಡಿದರು. ಮುಖಂಡರಾದ ಹನುಮಪ್ಪನಾಯಕ (ಬಬ್ಲುಗೌಡ), ಬಿ.ಜಿ.ಪಾಟೀಲ ಮುರಹಾಳ, ಬಸನಗೌಡ ಮಾಲಿಪಾಟೀಲ,ಚನ್ನಪ್ಪಗೌಡ ಬೆಕಿನಾಳ, ಬಸವರಾಜ ಹಂಚಲಿ,ಚನ್ನಯ್ಯಸ್ವಾಮಿ ಹಿರೇಮಠ, ಮಹಾಂತಯ್ಯಸ್ವಾಮಿ ಸುರಗಿಮಠ, ಹಣಮಂತ್ರಾಯಗೌಡ ರಸ್ತಾಪುರ, ರುದ್ರು ಮರಕಲ್, ಬಸಯ್ಯ ಗುತ್ತೇದಾರ, ಬಸಣ್ಣ ವಾಲಿಕಾರ, ಶರಣಪ್ಪ ಸಾಹಯ, ಸುಭಾಸರೆಡ್ಡಿ ಹೊಸಮನಿ, ಸಾಹೇನಬಗೌಡ, ಹರೀಶ ಸೇರಿದಂತೆ ಅನೇಕರಿದ್ದರು.

ಶಿಕ್ಷಕ ದೇವಿಂದ್ರಪ್ಪ ಕರಡಕಲ್ ನಿರೂಪಿಸಿದರು. ಕೃಷ್ಣರೆಡ್ಡಿ ಮುದನೂರ ಸ್ವಾಗತಿಸಿದರು. ಸಿದ್ದು ಚೌಧರಿ ವಂದಿಸಿದರು.

ವೈದ್ಯಕೀಯ ವಿಜ್ಞಾನ ಸಂಸ್ಥೆ -ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ



ಯಾದಗಿರಿ,ಜ.30-

ರಾಷ್ಟ್ರೀಯ ಸ್ವಚ್ಛತಾ ದಿನದ ಅಂಗವಾಗಿ ಶುಕ್ರವಾರ ದಿ:30 ರಂದು ಬೆಳಿಗ್ಗೆ 8 ಗಂಟೆಗೆ ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶ್ರಮದಾನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಮರುಳಸಿದ್ಧಾರಾಧ್ಯ ಅವರು ಹೇಳಿದರು.

ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಜಿಲ್ಲಾ ಆಸ್ಪತ್ರೆ ಹಾಗೂ ಆರೋಗ್ಯ ಕ್ಷೇತ್ರದ ವ್ಯಾಪ್ತಿ ಯಲ್ಲಿ ಶುಚಿತ್ವ ಕಾಪಾಡುವ ಉದ್ದೇ ಶದಿಂದ ಈ ಶ್ರಮದಾನ ಆಯೋಜಿ ಸಿದ್ದು, ಅಂದು ಬೆಳಿಗ್ಗೆ 8 ರಿಂದ 9 ಗಂಟೆಯವರೆಗೆ ಶ್ರಮದಾನ ನಡೆಯಲಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಪೋಲಿಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯೀಮ್ಸ, ನ್ಯಾಯವಾದಿಗಳ ಸಂಘ, ಗೃಹರಕ್ಷಕ ದಳ, ಎನ್‌ಎಸ್‌ಎಸ್ ಘಟಕ, ಇವರ ಸಹಯೋಗದಲ್ಲಿ ಈ ಶ್ರಮದಾನ ಆಯೋಜಿಸಿದ್ದು ಈ ಇಲಾಖೆ ಸಿಬ್ಬಂ ದಿಗಳು ಶ್ರಮದಾನ ನೀಡಲಿದ್ದಾರೆ ಎಂದು ಹೇಳಿದರು.

ರಾಷ್ಟ್ರೀಯ ಲೋಕ್ ಅದಾಲತ್ 2026 ಈ ವರ್ಷದ ಮೊದಲ ರಾಷ್ಟ್ರೀಯ ಲೋಕ್ ಅದಾಲತ್ ಬರುವ ಮಾರ್ಚ್ 14 ರಂದು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ರಾಷ್ಟ್ರೀಯ ಲೋಕ್ ಅದಾ ಲತ್ ನಲ್ಲಿ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣ ಗೋಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಗು ತ್ತಿದ್ದು, ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಇ-ಸಮನ್ಸ್ ಜಾರಿಯಲ್ಲಿ ಯಾದಗಿರಿ ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮ ಜಿಲ್ಲಾ ಪೋಲಿಸ್ ಇಲಾಖೆಯ ಸಹಕಾರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಇ-ಸಮನ್ಸ್, ನೋಟಿಸ್, ವಾರೆಂಟ್ ಜಾರಿಯಲ್ಲಿ ರಾಜ್ಯ ದಲ್ಲಿಯೇ ಈ ಜಿಲ್ಲೆ ಪ್ರಥಮ ಸ್ಥಾನ ಪಡೆದಿದೆ ಎಂದು ಹೇಳಿದರು.


ನಾಳೆ ಸಿಂಧನೂರಿನಲ್ಲಿ ಕೈಗಾರಿಕೋದ್ಯಮಿಗಳಿಗೆ ಅರಿವು ಕಾರ್ಯಕ್ರಮ

ರಾಯಚೂರು,ಜ.30-

ಕೈಗಾರಿಕೆ ಮತ್ತು ವಾಣಿಜ್ಯ ಇಲಾ ಖೆಯಿಂದ 2025-26ನೇ ಸಾಲಿನ ರಾಂಪ್ ಯೋಜನೆ ಯಕುರಿತು ಕೆಎಸ್‌ಎಮ್‌ಸಿಎ ಬೆಂಗಳೂರು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸಿಂಧನೂರಿನ ವಿನಯ್ ರೆಸಿಡೆನ್ಸಿ ಹೋಟೆಲ್‌ನಲ್ಲಿ ಜ.31 ರಂದು ಬೆಳಿಗ್ಗೆ 10.30ಕ್ಕೆ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಿಂಧನೂರು, ಮಸ್ಕಿ ತಾಲ್ಲೂಕು ಹಾಗೂ ಸುತ್ತಮುತ್ತಲಿನ ಕೈಗಾರಿಕಾ ಘಟಕಗಳ ಮುಖ್ಯಸ್ಥರು, ಉದ್ದಿಮೆದಾರರು ಈ ಕಾರ್ಯಾಗಾರದಲ್ಲಿ ಭಾಗ ವಹಿಸಿ ಕಾರ್ಯಾಗಾರದ ಸದುಪ ಯೋಗಪಡಿಸಿಕೊಳ್ಳ ಬಹುದಾ ಗಿದೆ. ಹೆಚ್ಚಿನ ಮಾಹಿತಿಗಾಗಿ ಲಕ್ಷ್ಮೀಕಾಂತ ಕುಲಕರ್ಣಿ ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 8861241093ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಧಿಕೃತ ಮತದಾರರನ್ನು ಪರಿಶೀಲಿಸಲು ಜಿಲ್ಲಾಧಿಕಾರಿಗಳಿಗೆ ಬಿಜೆಪಿ ಮನವಿ



ಬಾಗಲಕೋಟೆ,ಜ.29-

ಮತಕ್ಷೇತ್ರದ ಉಪ ಚುನಾವಣೆ ಹಿನ್ನೆಲೆಯಲ್ಲಿ ಗ್ರಾಮೀಣ ಹಾಗೂ ನಗರಗಳ ಮತದಾರರ ಪಟ್ಟಿಗಳಲ್ಲಿ ಬೇರೆ ಮತಕ್ಷೇತ್ರದ ಮತದಾರರು ಅನಧಿಕೃತವಾಗಿ

ಸೇರ್ಪಡಿಸುವ ಸಂಭವ ದೃಡವಾಗಿದ್ದು ಮತದಾರರ ಪಟ್ಟಿಯನ್ನು ಕುಲಂಕುಷವಾಗಿ ಪರಿಶೀಲಿಸ ಬೇಕೆಂದು ಬಿಜೆಪಿ ಗ್ರಾಮೀಣ ಹಾಗೂ ನಗರ ಮಂಡಲದಿಂದ ಜಿಲ್ಲಾಧೀಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಕೆಲವೇ ದಿನಗಳಲ್ಲಿ ಬಾಗಲಕೋಟೆ ಮತಕ್ಷೇತ್ರಕ್ಕೆ ಉಪ ಚುನಾವಣೆ -2026ರ ನಡೆಯಲ್ಲಿದ್ದು ಗ್ರಾಮೀಣ ಹಾಗೂ ನಗರಗಳ ಮತದಾರರ ಪಟ್ಟಗಳಲ್ಲಿ ಬೇರೆ ಮತಕ್ಷೇತ್ರದ ಮತದಾರರು ಅನಧಿಕೃತವಾಗಿ ಸೇರ್ಪಡಿಸುವ ಸಂಭವ ದೃಡವಾಗಿದ್ದು

ತಾವುಗಳು ಇದಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಹೊಸ ಮತದಾರರ ಸೇರ್ಪಡೆ ಹಾಗೂ ವರ್ಗಾವಣೆ ಆಗಲ್ಲಿರುವ ಮತದಾ ರರನ್ನು ಕುಲಂಕುಷವಾಗಿ ಪರಿಶೀಲಿಸಿ ನಂತರ ಅಂತಿಮ ಮತದಾರರ

ಪಟ್ಟಿಯನ್ನು ಪ್ರಕಟಿಸಲು ಸೂಚಿಸ ಬೇಕು ಮತ್ತು ಒಂದು ವೇಳೆ ಅನಧಿಕೃತವಾಗಿ ಸೇರ್ಪಡೆ ಮಾಡಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ದರು.

ಬಿಜೆಪಿ ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಕೋಣ್ಣೂರ, ಅಶೋಕ ಲಿಂಬಾವಳಿ, ಜಯಂತ

ಕುರಂದವಾಡ. ಪ್ರಭು ಹಡಗಲಿ, ಶಿವಾನಂದ ಟವಳಿ, ಕಪ್ಪಯ್ಯ ಮುತ್ತಿನಮಠ, ಯಲ್ಲಪ್ಪ ನಾರಾಯಣಿ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ ಸೇರಿದಂತೆ ಅನೇಕರು ಬಾಗವಹಿಸಿದ್ದರು.

ಒಂದನೇಯ ಪುಟದಿಂದ

ವಿಧಾನಸಭೆಯಲ್ಲಿ ಗದ್ದಲ ಎಬ್ಬಿಸಿದ ಬಳ್ಳಾರಿ ಘರ್ಷಣೆ: ಬಿ.ನಾಗೇಂದ್ರ -ಜನಾರ್ದನ ರೆಡ್ಡಿ ಸವಾಲು, ಪ್ರತಿಸವಾಲು

ತ್ರಿಯಾ ಎಂದ್ರೆ ಹೇಗೆ?. ಶ್ರೀರಾ ಮುಲು ವಾಲ್ಮೀಕಿ ಜನಾಂಗದ ನಾಯಕ. ನೀನು ನೂರು ಜನ್ಮ ಎತ್ತಿದರೂ ವಾಲ್ಮೀಕಿ ಜನಾಂಗದ ನಾಯಕ ಆಗಲ್ಲ ಎಂದು ನಾಗೇಂದ್ರ ವಿರುದ್ಧ ಜನಾರ್ದನ ರೆಡ್ಡಿ ಆಕ್ರೋಶ ವ್ಯಕ್ತಪಡಿಸಿದರು.

ಜನಾರ್ದನ ರೆಡ್ಡಿ ಹೇಳಿಕೆಗೆ ವಿಧಾನಸಭೆಯಲ್ಲಿ ಗದ್ದಲ ಉಂಟಾಯಿತು. ಸಚಿವ ಕೃಷ್ಣ ಬೈರೇಗೌಡ, ಶಿವಲಿಂಗೇಗೌಡ ಸೇರಿ ಕಾಂಗ್ರೆಸ್ ಸದಸ್ಯರು ವಿರೋಧ ವ್ಯಕ್ತಪಡಿಸಿದರು. ಈ ವೇಳೆ ಜನಾರ್ದನ ರೆಡ್ಡಿ ಸವಾಲ್ ಸ್ವೀಕರಿಸಿದ ನಾಗೇಂದ್ರ ವಾಲ್ಮೀಕಿ ಸಮಾಜ ನಮ್ಮ ಸಮಾಜ. ನಮ್ಮ ಸಮಾಜದ ಜನ ನಮ್ಮ ಜೊತೆಗೆ ಇದ್ದಾರೆ. ವಾಲ್ಮೀಕಿ ಭಾವಚಿತ್ರ ಇರೋ ಬ್ಯಾನರ್ ಕೆಳಗೆ ಹಾಕಿ ತುಳಿದಿದ್ದಾರೆ. ಇದು ಸರಿಯಲ್ಲ. ನನ್ನ ಸೋಲಿಸೋದು ಬಿಡೋದು ಇದ್ದೇ ಇರುತ್ತದೆ, ನಮ್ಮ ಹೋರಾಟವೂ ಇರುತ್ತದೆ. ರೆಡ್ಡಿಯವರ ಎಲ್ಲ ಚಾಲೆಂಜ್ ಗಳನ್ನೂ ನಾವು ಸ್ವಾಗತ ಮಾಡ್ತೇವೆ. ನನ್ನನ್ನು ಸೋಲಿಸ್ತೀರಾ, ಸೋಲಿಸಿ ನೋಡೋಣ ಅದನ್ನು ಜನ ತೀರ್ಮಾನ ಮಾಡ್ತಾರೆ ಎಂದು ರೆಡ್ಡಿಗೆ ಪ್ರತಿ ಸವಾಲು ಹಾಕಿದರು.

ರಕ್ಷಣೆ ಕೊಡಿ ಎಂದು ಮನವಿ ಮಾಡಿದ ಮೇಲ್ಮನೆ ಸದಸ್ಯ: ಬಳ್ಳಾರಿಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಇದಕ್ಕೆ ಕಾರಣರಾದ ಕಾಂಗ್ರೆಸ್ ಶಾಸಕರನ್ನ ಪ್ರಶ್ನಿಸಿದರೆ ನನ್ನನ್ನ ಟಾರ್ಗೆಟ್ ಮಾಡುತ್ತಾರೆ. ಹೀಗಾಗಿ ರಕ್ಷಣೆ ನೀಡಲು ಸರ್ಕಾರ ಕ್ರಮಕೈಗೊಳ್ಳಬೇಕು ಎಂದು ಬಿಜೆಪಿ ಸದಸ್ಯ ವೈ.ಎಂ.ಸತೀಶ್ ಮನವಿ ಮಾಡಿಕೊಂಡಿದ್ದಾರೆ.

ವಿಧಾನ ಪರಿಷತ್‌ನಲ್ಲಿ ರಾಜ್ಯಪಾಲರ ಭಾಷಣ ಕುರಿತ ವಂದನಾನಿರ್ಣಯದ ವೇಳೆ ಮಾತನಾಡಿದ ಸತೀಶ್, ವಾಲ್ಮೀಕಿ ಮಹರ್ಷಿ ಅವರ ಬ್ಯಾನರ್ ಕಟ್ಟುವ ವಿಚಾರವಾಗಿ ಜ.1ರಂದು ನಡೆದ ಗಲಾಟೆಯಲ್ಲಿ ಗುಂಡು ತಗುಲಿ ಓರ್ವ ಸಾವನ್ನಪ್ಪಿದ್ದರು. ಘಟನೆ ವೇಳೆ, ಶಾಸಕರ ವರ್ತನೆ ಹೇಗಿತ್ತು ಎಂಬುದು ಜಗ್ಗಜಾಹೀರಾಗಿದೆ. ಘಟನೆ ವಿರೋಧಿಸಿದರೆ ಶಾಸಕರು ನನ್ನನ್ನ ಟಾರ್ಗೆಟ್ ಮಾಡಲಿದ್ದಾರೆ. ಹೀಗಾಗಿ ನನಗೆ ಹೆಚ್ಚುವರಿಯಾಗಿ ಭದ್ರತಾ ಸಿಬ್ಬಂದಿ ಬೇಕು ಎಂದು ಮನವಿ ಮಾಡಿದರು.

ವಾಲ್ಮೀಕಿ ಪ್ರತಿಮೆ ಅನಾವರಣ ಸಂದರ್ಭದಲ್ಲಿ ಗಲಾಟೆ ಆಗಿದೆ. ಯಾವುದೇ ಮನವಿಯನ್ನ ಸರ್ಕಲ್‌ನಲ್ಲಿ ಅನಾವರಣ ಮಾಡಕೂಡದೆಂದು ಸುಪ್ರೀಂ ಕೋರ್ಟ್ ಆದೇಶವಿದೆ. ಹೀಗಿದ್ದರೂ ಪ್ರತಿಮೆ ಅನಾವರಣಕ್ಕೆ ಅನುಮತಿ ಕೊಟ್ಟಿದ್ದು ಯಾರು?, ಇದನ್ನ ಕಾರ್ಯರೂಪಗೊಳಿಸಲು ಅನುದಾನ ಎಲ್ಲಿಂದ ಬಂತು ಎಂದು ಪ್ರಶ್ನಿಸಿದರು.

ಪ್ರತಿಮೆ ಅನಾವರಣ ವಿರುದ್ಧ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ವಾಲ್ಮೀಕಿ ವಿರೋಧಿ ಎನ್ನಿಸಿಕೊಳ್ಳಬೇಕು. ಈ ಬಗ್ಗೆ ಸ್ಥಳೀಯ ಶಾಸಕ ಭರತ್ ರೆಡ್ಡಿ ಅವರನ್ನ ಪ್ರಶ್ನಿಸಲು ಮುಂದಾದರೆ ನಾನು ಟಾರ್ಗೆಟ್ ಆಗುತ್ತೇನೆ ಎಂದರು.

ಬ್ಯಾನರ್ ಗಲಾಟೆ ಬಳಿಕ ಅಧಿಕಾರ ಸ್ವೀಕರಿಸಿದ ಮೊದಲ ದಿನದಂದೇ ಎಸ್‌ಪಿಯನ್ನ ವರ್ಗಾವಣೆ ಮಾಡಲಾಗಿದೆ. ಎರಡು ದಿನಗಳ ಹಿಂದೆ ಎಎಸ್‌ಪಿಯನ್ನು ಟ್ರಾನ್ಸ್‌ಫರ್ ಮಾಡಲಾಗಿದೆ. ಬಳ್ಳಾರಿಯಲ್ಲಿ ಸರ್ಕಾರ ಸುಪ್ರೀಂ ಇದೆಯಾ? ಅಥವಾ ಬಳ್ಳಾರಿ ಶಾಸಕರು ಸುಪ್ರೀಂ ಇದ್ದಾರಾ ಎಂದು ಪ್ರಶ್ನಿಸಬೇಕಿದೆ. ಬಳ್ಳಾರಿಯಲ್ಲಿ ಡ್ರಗ್ಸ್, ಜೂಜಾಟ ಹೆಚ್ಚಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ನಾನು ಯಾವಾಗಲೂ ಒಬ್ಬನೇ ಓಡಾಡುತ್ತೇನೆ. ಹೀಗಾಗಿ ನನಗೆ ಇರುವ ಪಿಎಸ್ ಜೊತೆಗೆ ಹೆಚ್ಚುವರಿ ಪಿಎಸ್ ಕೊಡಿ ಎಂದು

ವಿಜೃಂಭಣೆಯಿಂದ ಸಾಗಿದ ಶ್ರೀ ಬೂದಿ ಬಸವೇಶ್ವರ ಸ್ವಾಮಿ ಮಹಾರಥೋತ್ಸವ

ಮರಳಿ ರಥ ತನ್ನ ಜಾಗದಲ್ಲಿ ಬಂದು ಸೇರುತ್ತದೆ. ಇದು ಮಿಣಿ ಇಲ್ಲದೇ ಸಾಗುವ ಜಾತ್ರಾ ಮಹೋತ್ಸ ಎಂದೇ ಪ್ರಸಿದ್ದವಾಗಿದೆ.

ಮಠದಲ್ಲಿ ಬೆಳಗ್ಗೆಯಿಂದ ಕರ್ತೃ ಗದ್ದುಗೆ ಮಹಾರು ದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ನಡೆದವು. ಶ್ರೀಮಠಕ್ಕೆ ವಿದ್ಯುತ್ ದೀಪಾಲಂಕಾರ, ವಿವಿಧ ಬಣ್ಣಗಳ ಪುಷ್ಪಾಲಂಕಾರ ಮಾಡಲಾಗಿತ್ತು. ರಥವನ್ನು ಗ್ರಾಮದ ಸೇವಾ ಸಮಿತಿಯಿಂದ ರಥಕ್ಕೆ ಬೆಳಗ್ಗೆ ಜಜ್ ಹಚ್ಚಿ, ಮಾವಿನ ಎಲೆಗಳ ಅಲಂಕಾರ ಮಾಡಲಾಗಿತ್ತು. ಸಂಜೆಯ ವೇಳೆ, ಗ್ರಾಮದಲ್ಲಿನ ಕರ್ತೃ ಗದ್ದುಗೆಗೆ ಶ್ರೀ ಬೂದಿಬಸವ ಶಿವಾಚಾರ್ಯ ಸ್ವಾಮೀಜಿ ತೆರಳಿ ವಿಶೇಷ ಪೂಜೆ ಸಲ್ಲಿಸಿ ಬಳಿಕ ಮಠಕ್ಕೆ ಆಗಮಿಸಿ ಪೂಜೆಯನ್ನು ನೆರವೇರಿಸಿದರು. ಉತ್ಸವ ಮೂರ್ತಿಯನ್ನು ರಥದಲ್ಲಿ ಇರಿಸುವ ಮೂಲಕ ಪೀಠಾಧಿಪತಿಗಳ ಆಜ್ಞೆಯಂತೆ ರಥವನ್ನು ಎಳೆದು ಬಳಿಕ ಮಹಾರಥೋತ್ಸವ ವಿಜೃಂಭಣೆಯಿಂದ ನಡೆಯಿತು.

800 ವರ್ಷಗಳ ಇತಿಹಾಸ ಹೊಂದಿರುವ ಈ ಜಾತ್ರೆಯಲ್ಲಿ ಎಲ್ಲರೂ ಕೂಡಿ ಎಳೆಯುವುದು ವಿಶೇಷ. ಆಂಧ್ರ, ತೆಲಂಗಾಣ, ಮಹಾರಾಷ್ಟ ಹಾಗೂ ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಭಕ್ತರು ಆಗಮಿಸುತ್ತಾರೆ. ಎಲ್ಲ ಧರ್ಮದವರು ಸೇರಿಕೊಂಡು ಜಾತ್ರೆಯನ್ನು ನಡೆಸುವುದು ಈ ಪಾರಂಪರಿಕ ಮಠದ ವಿಶೇಷ ಎಂದು ಮಠದ ಪೀಠಾಧಿಪತಿ ಶ್ರೀ ಬೂದಿಬಸವ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಬಾ ಬಸವ ಎಂದು ಕರೆದರೆ ಬರುವ ರಥ ಕಾಣುವುದು ಗಬ್ಬೂರ ಶ್ರೀ ಬೂದಿಬಸವೇಶ್ವ ಸ್ವಾಮಿಯ ಜಾತ್ರೆಯಲ್ಲಿ ಮಾತ್ರ. ನಿಜಾಂಶಾಹಿ ಆಡಳಿತದ ಸಮಯದಲ್ಲಿ ನಿಜಾಮರು ಜಾತ್ರೆಯನ್ನು ನಿಲ್ಲಿಸಿದ್ದರು. ಆಗ ಅನ್ಯಾರೋಗ ಎದುರಾಗಿ, ಬಳಿಕ ಮಠದ ಸ್ವಾಮೀಜಿಗೆ ಶರಣಾಗಿ, ಮಠಕ್ಕೆ 120 ಎಕರೆ ಇನಾಂ ನೀಡಿರುವುದು ಇತಿಹಾಸ ಎನ್ನುತ್ತಾರೆ ಗ್ರಾಮದ ನಿವಾಸಿ ಬಿಬ್ಬಿಬಚಾರಸ. ನಾವು 23 ವರ್ಷಗಳಿಂದ ಮಠಕ್ಕೆ ಆಗಮಿಸುತ್ತಿದ್ದೇವೆ. ಭಕ್ತಿಯಿಂದ ಬೇಡಿದರೆ ನಮ್ಮ ಇಷ್ಟಾರ್ಥಗಳು ನೆರವೇರುತ್ತವೆ. ಏನೇ ಸಮಸ್ಯೆಗಳಿದ್ದರೂ ದೂರವಾಗುತ್ತವೆ. ವರ್ಷದಿಂದ ವರ್ಷಕ್ಕೆ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ ಎನ್ನುತ್ತಾರೆ ಭಕ್ತೆ ಸುಜಾತ.

ಅಬ್ಬೆ ತುಮಕೂರಿನ ಡಾ.ಗಂಗಾಧರ ಸ್ವಾಮೀಜಿ, ಮೈಸೂರಿನ ಡಾ.ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ, ಕೆಂಬಾವಿ ಹಿರೇಮಠದ ಶ್ರೀ ಚನ್ನಬಸವ ಶಿವಾಚಾರ್ಯ, ಸುಲ್ತಾನಪುರ ಮಠದ ಶ್ರೀ ಶಂಭು ಸೋಮನಾಥ ಶಿವಾಚಾರ್ಯ ಸ್ವಾಮೀಜಿ, ದೇವರಭೂಪುರದ ಗಜದಂಡ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ಹಲವು ಹರಗುರು - ಚರಮೂರ್ತಿಗಳು, ಮಂತ್ರಾಲಯದ ಶಾಸಕ ವೈ.ಬಾಲ ನಾಗಿರೆಡ್ಡಿ, ತೆಲಂಗಾಣದ ಗದ್ವಾಲ್ ಶಾಸಕ ಬಂಡ್ಲ ಕೃಷ್ಣಮೋಹನ್ ರೆಡ್ಡಿ, ಮಾಜಿ ಶಾಸಕ ಸಾಯಿಪ್ರಸಾದ್ ರೆಡ್ಡಿ, ಶರಣಗೌಡ ಪಾಟೀಲ್ ಲಕ್ಕಂದಿನ್ನಿ, ರಾಜಶೇಖರ ಪಾಟೀಲ್ ಮುಷ್ಟೂರು ಸೇರಿದಂತೆ ರಾಜಕೀಯ ಮುಖಂಡರು, ಗಣ್ಯರು ಸೇರಿದಂತೆ ಸಹಸ್ರ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಜಾತ್ರೆ ಸಮಾರೋಪ ಹಾಗೂ ಧಾರ್ಮಿಕ ಸಭೆ 2026 ಫೆ.1ರಂದು ನಡೆಯಲಿದ್ದು, ಅಂದು ಶ್ರೀಗಳ ಸಮ್ಮುಖದಲ್ಲಿ ರಥ ಮೂಲ ಸ್ಥಾನಕ್ಕೆ ತೆರಳಲಿದೆ. ಭಕ್ತರು ಎಷ್ಟೇ ಎಳೆದರು ಮೂಲಸ್ಥಾನಕ್ಕೆ ಹೋಗುವುದಿಲ್ಲ. ಬದಲಾಗಿ ಶ್ರೀಗಳು ಬಾ ಬಸವ ಎಂದು ಕರೆದು ಹೆಜ್ಜೆ ಇಟ್ಟಂತೆ, ಕೈಯಿಂದ ಕರೆದಾಗ ಮಾತ್ರ ತೆರಳುತ್ತದೆ ಎನ್ನುವ ನಂಬಿಕೆ ಭಕ್ತರಲ್ಲಿದ್ದು, ಅಂದು ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಭಾಗಿಯಾಗಲಿದ್ದಾರೆ.

ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ಸಾರ್ವಜನಿಕರಿಗೆ ರಸ್ತೆ ಸುರಕ್ಷತೆ ಜಾಗೃತಿ ಅಗತ್ಯ : ನ್ಯಾ.ಮಾರುತಿ ಬಾಗಡೆ

ರ್ಣನ ಮಾತನಾಡಿ, ಬಿಸಿಲಿನ ಕಾರಣಕ್ಕೆ ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡುವ ಜನರು ಒಂದು ಅಂಶವನ್ನು ತಿಳಿದುಕೊಳ್ಳಬೇಕು. ಜೀವಕ್ಕಿಂತ ಬಿಸಿಲು ಅಷ್ಟೇನು ಮುಖ್ಯವಲ್ಲ. ಹೆಲ್ಮೆಟ್ ಧರಿಸುವ ಮೂಲಕ ಜೀವ ರಕ್ಷಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಗೌರವಾನ್ವಿತ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಡಿ.ಮಹಾವರಕರ್, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹತ್ತಿಕಾಳ್ ಪ್ರಭು ಸಿದ್ದಪ್ಪ, ಪ್ರಧಾನ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸಿದ್ದರಾಮಪ್ಪ ಕಲ್ಯಾಣರಾವ್, ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸುಧೀನ್ ಕುಮಾರ್ ಡಿ.ಜೆ., 2ನೇ ಹೆಚ್ಚುವರಿ ಹಿರಿಯ ಶ್ರೇಣಿ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಶ್ವೇತಾ ಸಿಂಗ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, 3ನೇ ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಕೃಪಾ ಸಿ.ಎಲ್., ಪ್ರಧಾನ ವ್ಯವಹಾರ ನ್ಯಾಯಾಧೀಶರಾದ ಚನ್ನಬಸಪ್ಪ ಆರ್.ಕೂಡಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿಲ್ಲಾ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳಾದ ಗುರುನಾಥ ರೆಡ್ಡಿ, ವಕೀಲರಾದ ಶಿವಶಂಕರ್, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಸದಸ್ಯರಾದ ಸಂಪತ್ತು ಕುಮಾರ್, ತಿರುಮಲ್ಲ ರೆಡ್ಡಿ, ಕೇಶರಾವ್ ಸೇರಿದಂತೆ ಇತರರು ಇದ್ದರು.

ಫೆ.01ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಶ್ರೀಸಿದ್ದರಾಮನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ತಿಂಥಣಿ ಬ್ರಿಜ್‌ನ ಶಾಖಾ ಮಠದಿಂದ ನಿರ್ಗಮಿಸಿ ಮುಖ್ಯಮಂತ್ರಿಗಳೊದಿಗೆ ಹೆಲಿಕಾಪ್ಟರ್ ಮೂಲಕ ಕಲಬುರಗಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಯಚೂರು ಉತ್ಸವದ ಕರಪತ್ರಗಳನ್ನು ಮನೆಮನೆಗೆ ತಲುಪಿಸಿ ಪ್ರಚಾರ ನೀಡಲು ಡಿಹೆಚ್‌ಓ ಡಾ.ಸುರೇಂದ್ರ ಬಾಬು ಸೂಚನೆ

ಕಾರ್ಯಕ್ರಮಗಳಲ್ಲಿ ಜನರು ತಪ್ಪದೇ ಭಾಗಿಯಾಗಬೇಕು. ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸಲು ಸೂಚನೆ ನೀಡಿದರು.

ಜನತೆಗೆ ಪ್ರೇರೇಪಣೆಗಾಗಿ ಈಗಾಗಲೇ ದೇಸಿ ಕ್ರೀಡೆ, ಮ್ಯಾರಾಥಾನ್, ಸೈಕ್ಲಿಂಗ್, ದೇಹದಾರ್ಢ್ಯ ಸ್ಪರ್ಧೆಗಳನ್ನು ಏರ್ಪಡಿಸಿ ಉತ್ಸವದ ಕಳೆ ಹೆಚ್ಚಿಸಲಾಗಿದೆ. ಅದರಂತೆ ಇನ್ನುಮುಂದೆಯು ಸಹ ಬೇರೆ ಬೇರೆ ಕಾರ್ಯಕ್ರಮಗಳಿವೆ. ಮಕ್ಕಳ ಉತ್ಸವ, ಆಹಾರ ಮೇಳ, ಗ್ಯಾರಂಟಿ ಮೇಳ, ಹೆಲಿಕ್ಯಾಪ್ಟರ್ ಮೂಲಕ ರಾಯಚೂರು ಹಾಗೂ ಸುತ್ತಲಿನ ಸ್ಥಳ ವೀಕ್ಷಣೆ, ಹೆಸರಾಂತ ಕಲಾವಿದರು, ನೃತ್ಯಪಟುಗಳಿಂದ ಪ್ರತಿದಿನ ಕೃಷಿ ವಿಶ್ವವಿದ್ಯಾಲಯದ ಆವರಣ, ಜಿಲ್ಲಾ ರಂಗಮದಿರ, ಮಹಿಳಾ ಸಮಾಜದ ಗ್ರೌಂಡ್, ವಾಲ್ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತವೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್.ಎನ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಡಿಪಿಎಮ್ ನವೀನ್ ಕುಮಾರ್, ಹೆಚ್‌ಐಓ ಸುರೇಶ್, ನಾಗರಾಜ್, ಜ್ಯೋತಿ, ಭಾರತಿ ಸೇರಿದಂತೆ ಇತರರು ಇದ್ದರು.

ಆರೋಗ್ಯ ಇಲಾಖೆಯಿಂದ ಕಾರ್ಯಕ್ರಮ: ಜಾಲಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಿಗೆ ರಾಯಚೂರು ಉತ್ಸವದ ಕುರಿತು ಮಾಹಿತಿ ನೀಡಲಾಯಿತು.

ಯರಮರಸ್ ಆದರ್ಶ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ರಾಯಚೂರು,ಜ.30- ತಾಲೂಕಿನ ಯರಮರಸಿನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿ ದೆಂದು ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಈರಣ್ಣ ಗೋಸಗಿ ಅವರು ತಿಳಿಸಿದ್ದಾರೆ.

ಪ್ರಸ್ತುತ 2025-26ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರು ಇದ್ದು, ಅರ್ಜಿಯನ್ನು ಫೆ.25ರೊಳಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ: .... ಅಥವಾ ಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಅವಕಾಶವನ್ನು ಪಾಲಕರು ಇದರ ಸದುಪಯೋಗ ಪಡಿಸಿಕೊಳ್ಳಬ ಹುದು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಸಹಾಯವಾಣಿ ಸಂಖ್ಯೆ: 94810 87977ಗೆ ಸಂಪರ್ಕ ಮಾಡಬಹುದಾಗಿದೆ .

ಜಿಲ್ಲಾಧಿಕಾರಿಗಳಿಂದ ಚಿಂಚೋಳಿ (ಹೆಚ್) ಗ್ರಾಮದಲ್ಲಿ ''ರೇಷ್ಮೆ ಮೇಳ''ಕ್ಕೆ ಚಾಲನೆ



ಕಲಬುರಗಿ,ಜ.30- ಕೇಂದ್ರ ರೇಷ್ಮೆ ಮಂಡಳಿ, ರಾಜ್ಯ ರೇಷ್ಮೆ ಇಲಾಖೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವುಗಳ ಸಹಯೋಗದೊಂದಿಗೆ ಗುಣಮಟ್ಟದ ರೇಷ್ಮೆಗೂಡಿನಿಂದಗುಣ ಮಟ್ಟದ ರೇಷ್ಮೆ ಉತ್ಪಾದನೆಯೆಂಬ ಉದ್ದೇಶದೊಂದಿಗೆ ಇತ್ತೀಚೆಗೆ ಕಾಳಗಿ ತಾಲೂಕಿನ ಚಿಂಚೋಳಿ (ಹೆಚ್) ಗ್ರಾಮದ ಮೇ|| ಲುಂಬಿನಿ ಸ್ವಯಂ ಚಾಲಿತ ರೇಷ್ಮೆ ನೂಲು ಬಿಚ್ಚಾಣಿಕೆ ಘಟಕದಲ್ಲಿ ಆಯೋಜಿಸಲಾದ ರೇಷ್ಮೆ ಬೆಳೆಗಾರರು ಹಾಗೂ ನೂಲು ಬಿಚ್ಚಾಣಿಕೆದಾರರ ''ರೇಷ್ಮೆ ಮೇಳ''ಕ್ಕೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ರೇಷ್ಮೆ ವಸ್ತು ಪ್ರದರ್ಶನ ಹಾಗೂ ತೋಟಗಾರಿಕೆ ವಸ್ತು ಪ್ರದರ್ಶನದ ಮಳಿಗೆ ಉದ್ಘಾಟಿಸಿ ರೇಷ್ಮೆ ಬೆಳೆಗಾರರು ಹಾಗೂ ನೂಲು ಬಿಚ್ಚಾಣಿಕೆದಾರರನ್ನು ಉದ್ದೇಶಿಸಿ ಮಾತನಾಡಿದರು. ನಂತರ ಅವರು ಉತ್ತಮ ರೇಷ್ಮೆ ಗೂಡು ಬೆಳೆದಂತಹ ಕಲಬುರಗಿ ಹಾಗೂ ಬೀದರ ಜಿಲ್ಲೆಗಳ ಪ್ರಗತಿಪರ ರೇಷ್ಮೆ ಬೆಳೆಗಾರರಿಗೆ ಪ್ರಶಂಸಾ ಪ್ರಮಾಣ ಪತ್ರ ವಿತರಿಸಿ ಸನ್ಮಾಸಿದರು. ನಂತರ ಸ್ವಯಂ ನೂಲು ಬಿಚ್ಚಾಣಿಕೆ ಘಟಕದ ಕಾರ್ಯಚಟುವಟಿಕೆಯನ್ನು ವೀಕ್ಷಿಸಿದರು. ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ್ ರೇಷ್ಮೆ ಉಪ ನಿರ್ದೇಶಕ ಎಸ್. ಪ್ರಕಾಶ ಬಾಬು ಇಲಾಖಾ ಯೋಜನೆಗಳ ಬಗ್ಗೆ ಕುರಿತು ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಧಾರವಾಡ ಡಿ ಸಿ.ಎಸ್.ಬಿ.-ಸಿಎಸ್‌ಟಿಆರ್‌ಐ ವಿಜ್ಞಾನಿ ಎಸ್.ಎಮ್.ಹುಕ್ಕೇರಿ, ಕಲಬುರಗಿ ಜಿಲ್ಲಾ ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ರವಿಗೌಡ, ಆರ್.ವಿ.ಎಸ್. ಟ್ರೇಡಿಂಗ್ ಕಂಪನಿಯ ಸಿ.ಇ.ಓ. ರೇಷ್ಮಾ ಎ.ಕೆ., ತೋಟಗಾರಿಕೆ ಜಂಟಿ ನಿರ್ದೇಶಕ ಸಂತೋಷ ಇನಾಮದಾರ, ಬೀದರ್ ಜಿಲ್ಲಾ ಪಂಚಾಯತ್ ರೇಷ್ಮೆ ಉಪ ನಿರ್ದೇಶಕ ರಂಗನಾಥ, ಬೀದರ ಬಿ ವಿಜ್ಞಾನಿ ಡಾ. ಶ್ರೀನಿವಾಸ್. ಕೆ, ಜಿಲ್ಲಾ ಆರೋಗ್ಯಾಧಿಕಾರಿ ಡಾ|| ಶರಣಬಸಪ್ಪಾ ಕ್ಯಾತನಾಳ, ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಕಾಸ ಸಜ್ಜನ, ಕಲಬುರಗಿ ವಿಭಾಗ ರೇಷ್ಮೆ ಸಹಾಯಕ ನಿರ್ದೇಶಕ ಅನಿಲ ಎಸ್.ವಾಡಿ, ಗೂಡಿನ ನಂತರ ಚಟುವಟಿಕೆ ಜೇವರ್ಗಿ, 500 ಜನರೇಷ್ಮೆ ಬೆಳೆಗಾರರು, ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರದ ಮಾಲೀಕರು, ರೀಲಿಂಗ್ ತರಬೇತಿ ಪಡೆದ ನವ ಉದ್ಯಮಿಗಳು, ಕಲಬುರಗಿ ಹಾಗೂ ಬೀದರ್ ಜಿಲ್ಲೆ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿಜ್ಞಾನಿ ಮಂಜುನಾಥ ಆರ್.ಎನ್. ಅವರು ಸ್ವಾಗತಿಸಿದರು. ಕಲಬುರಗಿ ತಾಂತ್ರಿಕ ಸೇವಾ ಕೇಂದ್ರದ ರೇಷ್ಮೆ ವಿಸ್ತರಣಾಧಿಕಾರಿ ವೀಣಾ ಹಾಗೂ ಅಣವೀರಪ್ಪ ಅವರು ಕಾರ್ಯಕ್ರಮ ನಿರೂಪಿಸಿ ದರು. ಕೊನೆಯಲ್ಲಿ ಮಹೇಶ್ವರಿ .ವಿ. ಸಜ್ಜನ ವಂದಿಸಿದರು.

ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಖಡಕ್ ಸೂಚನೆ

ಒತ್ತಾಯವಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ದೇವದುರ್ಗ ತಾಲೂಕಿನಲ್ಲಿ ವಾರಗಳ ಕಾಲ ವಿಶೇಷ ಕಾರ್ಯಾಚರಣೆಗಿಳಿಯಬೇಕು. ದೇವದುರ್ಗ ಮತ್ತು ಮಾನವಿಯಲ್ಲಿ ಆರ್‌ಟಿಓ ಅಧಿಕಾರಿಗಳು ವಿಶೇಷ ಡ್ರೆವ್ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪೊಲೀಸ್ ರಕ್ಷಣೆಗೆ ಪಡೆದುಕೊಳ್ಳಿ: ನೇಮ್ ಪ್ಲೇಟ್ ಇಲ್ಲದೇ ಮಣ್ಣು ತುಂಬಿಕೊಡು ಓಡಾಡುವ ಟಿಪ್ಪರ್, ಟ್ರ್ಯಾಕ್ಟರ್‌ಗಳ ಮೇಲೆ ಕಣ್ಣಿಟ್ಟು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ದಾಳಿ ನಡೆಸಿ ಅಂತಹ ವಾಹನಗಳನ್ನು ಸೀಜ್ ಮಾಡಬೇಕು. ಹೇವಿ ಪೆನಾಲ್ಟಿ ಹಾಕಿ ಬಿಸಿ ಮುಟ್ಟಿಸಬೇಕು, ಸೀಜ್ ಮಾಡಿ ಸುಮ್ಮನೆ ಬಿಡಬಾರದು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಚೆಕ್‌ಪೋಸ್ಟ್ ಸ್ಥಾಪನೆಗೆ ಸೂಚನೆ: ಜಾಲಹಳ್ಳಿ, ಗಬ್ಬೂರ ಸೇರಿದಂತೆ ದೇವದುರ್ಗ, ಸಿರವಾರ, ಲಿಂಗಸೂರು, ಮಾನವಿ, ಸಿಂಧನೂರ ತಾಲೂಕಿನ ವಿವಿಧೆಡೆ ಕೂಡಲೇ ಚೆಕ್‌ಪೋಸ್ಟ್ ಸ್ಥಾಪನೆಗೆ ಕ್ರಮವಹಿಸಿ ಅಕ್ರಮ ಮರಳು ಸಾಗಣೆ ತಡೆಯಬೇಕು. ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಸೇರಿ ಒಟ್ಟು ಮೂರು ತಂಡಗಳಾಗಿ ಚೆಕ್‌ಪೋಸ್ಟನಲ್ಲಿ ನಿಗಾ ಇಡಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಯಿದಲೇ ಯಾವುದೇ ಮೆಸೇಜ್ ಪಾಸಾಗದಂತೆ ಜಾಗರೂಕರೆವಹಿಸಿ ಬೇರೆ ಬೇರೆ ಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಚೆಕ್‌ಪೋಸ್ಟಗಳಿಗೆ ನಿಯೋಜನೆ ಮಾಡಬೇಕು. ಬೇರೆ ಬೇರೆ ಇಲಾಖೆಗಳಲ್ಲಿನ ಎಫ್‌ಡಿಎ, ಎಸ್‌ಡಿಎ ಸೇರಿದಂತೆ ಇನ್ನಿತರ ಸಿಬ್ಬಂದಿಯನ್ನು ಕಾರ್ಯಾಚರಣೆ ನಡೆಸುವ ಸಮಿತಿಗೆ ಸೇರಿಸಿಕೊಂಡು ಅವರಿಗೆ ಜವಾಬ್ದಾರಿ ಹಂಚಿಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಿಸಿ ಟಿವಿ ಅಳವಡಿಕೆಗೆ ಸೂಚನೆ: ಬೇರೆ ಬೇರೆ ಕಡೆಗಳಲ್ಲಿ ಸಿಸಿ ಟಿವಿ ಅಳವಡಿಸಿ ಅವರು ಕಾರ್ಯ ನಿರ್ವಹಿಸುವಂತೆ ನೋಡಿ ನಿಗಾ ವಹಿಸಬೇಕು. ಸಿಟಿ ಟಿವಿ ರೆಕಾರ್ಡ್ ಇಟ್ಟುಕೊಳ್ಳಬೇಕು. ಸಿಸಿಟಿವಿ ಅಳವಡಿಸಿಲ್ಲ ಎಂದು ಯಾವುದೇ ಕಾರಣಕ್ಕೂ ಸಬೂಬು ಹೇಳುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸೀಜ್ ಮಾಡಿದ ಸ್ಯಾಂಡ್ ವಿಲೆಗೆ ಸೂಚನೆ: ಜಿಲ್ಲೆಯಲ್ಲಿ ಕೆಕೆಆರ್‌ಡಿಬಿಯಿಂದ ವಿವಿಧ ಕಾಮಗಾರಿಗಳು ನಡೆಯುತ್ತಿವೆ. ಜಲಧಾರೆಯ ದೊಡ್ಡ ಪ್ರೊಜೆಕ್ಟ್ ಅನುಷ್ಠಾನವಾಗುತ್ತಿದೆ. ನಿರ್ಮಿತಿ ಕೇಂದ್ರದಿದಲೂ ಕೆಲವು ಕಾಮಗಾರಿಗಳು ಚಾಲ್ತಿಯಲ್ಲಿವೆ. ಇಂತಹ ಕಾಮಗಾರಿಗಳಿಗೆ ಮಣ್ಣು ಬೇಕಾಗುತ್ತದೆ. ಇದುವರೆಗೆ ಜಪ್ತಿ ಮಾಡಿದ ಮಣ್ಣಿಗೆ ನಿಯಮಾನುಸಾರ ಇ ಹರಾಜು ಪ್ರಕ್ರಿಯೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಯುಕ್ತರು, ತಹಸೀಲ್ದಾರಗೆ ಸೂಚನೆ: ಸಹಾಯಕ ಆಯುಕ್ತರು ಮತ್ತು ತಹಸೀಲ್ದಾರರು ಅಕ್ರಮ ಮರಳು ಸಾಗಣೆ ಪ್ರಕರಣಗಳ ಬಗ್ಗೆ ವಿಶೇಷ ನಿಗಾವಹಿಸಬೇಕು. ತಮ್ಮ ಹಂತದಲ್ಲಿ ತಂಡಗಳನ್ನು ರಚಿಸಿಕೊಂಡು ಆಯಾ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯಾವ ಕಡೆಗೆ ಎಷ್ಟು ದಾಳಿ ಮಾಡಿದ್ದೀರಿ ಎಂಬುದರ ಬಗ್ಗೆ ಟಾರ್ಗೆಟ್ ನೀಡಬೇಕು. ತಮ್ಮ ಹಂತದಲ್ಲಿ ದಾಳಿ ನಡೆಸಿ ಜೆಸಿಬಿ, ಟಿಪ್ಪರ್, ಟ್ರ್ಯಾಕ್ಟರ್ ಸೀಜ್ ಮಾಡಿ ಬಿಸಿಮುಟ್ಟಿಸಬೇಕು ಎಂದು ಸೂಚನೆ ನೀಡಿದರು.

ಆರ್‌ಟಿಓ ಅಧಿಕಾರಿಗಳಿಗೆ ಸೂಚನೆ:ತಂಡವಾಗಿ ಕೆಲಸ ಮಾಡಿ: ಪೊಲೀಸ್ ಸೇರಿದಂತೆ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಂಡವಾಗಿ ಕೆಲಸ ಮಾಡಬೇಕು. ರಾತ್ರಿ 9 ಗಂಟೆಯಿದ ಬೆಳಗಿನ 7 ಗಂಟೆವರೆಗಿನ ಅವಧಿಯಲ್ಲಿ ವಿಶೇಷ ನಿಗಾವಹಿಸಬೇಕು. ಒಂದೇ ವಾಹನಕ್ಕೆ ಅನುಮತಿ ಪಡೆದು ಒಂದೇ ನೇಮ್ ಪ್ಲೇಟ್ ಮೇಲೆ ನಾಲ್ಕಾರು ಗಾಡಿ ಓಡಿಸುವ ಜಾಲದ ಬಗ್ಗೆ ಗಮನ ಹರಿಸಬೇಕು ಎಂದು ಇದೆ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೂರುಗಳ ದಾಖಲಿಸಿ: ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ ಅವರು ಮಾತನಾಡಿ, ಉಪಖನಿಜ ಸಾಗಣೆ ವಾಹನಗಳಿಗೆ ಜಿಪಿಎಸ್ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಜಿಲ್ಲೆಯಲ್ಲಿ ಹಲವಾರು ವಾಹನಗಳಿಗೆ ಪರವಾನಿಗೆ ಇಲ್ಲದೇ, ನಂಬರ್ ಪ್ಲೇಟ್ ಇಲ್ಲದೇ ಹಾಗೂ ಜಿಪಿಎಸ್ ನೋಂದಣಿ ಇಲ್ಲದೇ ಅನಧೀಕೃತವಾಗಿ ಉಪ ಖನಿಜ ಸಾಗಣೆ ಮಾಡುವ ಬಗ್ಗೆ ದೂರುಗಳನ್ನು ದಾಖಲಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಡಾ.ಹಂಪಣ್ಣ ಸಜ್ಜನ, ದೇವದುರ್ಗ, ಲಿಂಗಸೂರು, ಅರಕೇರಾ, ಸಿರವಾರ, ಮಸ್ಕಿ, ಸಿಂಧನೂರ ಮತ್ತು ಮಾನ್ವಿ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಾದ ಮುತ್ತಣ್ಣ ಅವರು ಸಭೆಗೆ ಇಲಾಖೆಯ ಗುರಿ ಸಾಧನೆಗಳ ಬಗ್ಗೆ ಮಾಹಿತಿ ನೀಡಿದರು.

ಜನವರಿ 30ರವರೆಗೆ 4,967 ಅಭ್ಯರ್ಥಿಗಳು ನೋಂದಣಿ ರಾಯಚೂರು ಉತ್ಸವ ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಸಿದ್ಧತೆಗೆ ಸೂಚನೆ

ನಿರ್ದೇಶಕರಾದ ರಾಜಕುಮಾರ್ ಪಾಟೀಲ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವ್ಯವಸ್ಥಾಪಕರಾದ ಸಂತೋಷ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಘದ ಕಾರ್ಯದರ್ಶಿ ಜಂಬಣ್ಣ, ಎಸ್.ಬಿ.ಐ ಆರ್‌ಸೇಟ್ ನಿರ್ದೇಶಕರಾದ ವಿಜಯಕುಮಾರ್, ಜಿಲ್ಲೆಯ ವಿವಿಧ ಐಟಿಐ ಕಾಲೇಜ್ ಮುಖ್ಯಸ್ಥರಾದ ಶಿವರಾಜ ಕುಮಾರ್, ರುದ್ರಗೌಡ, ಹೈದರಾಸಾಬ್, ತೋಮಸಪ್ಪ, ರಾಮಣ್ಣ ಸೇರಿದಂತೆ ಇತರರು ಇದ್ದರು.

ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆ ತರಬೇತಿ

ರಾಯಚೂರು ಜನವರಿ 30- ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಯಚೂರಿನ ಉಪ ನೋಂದಣಿ ಕಚೇರಿಯಲ್ಲಿ ಪೇಪರ್‌ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯ ಕುರಿತು ತರಬೇತಿಯನ್ನು ಜನವರಿ 31ರ ಮಧ್ಯಾಹ್ನ 3 ಗಂಟೆಗೆ ಹಮಿಕೊಳ್ಳಲಾಗಿದ್ದು, ತರಬೇತಿಯ ಸದುಪರ್ಯೋಗವನ್ನು ಸಾರ್ವಜನಿಕರು ಪಡೆಯಬಹುದಾಗಿದೆ.

ಸಂಬಧಪಟ್ಟ ದಸ್ತಾವೇಜು ಬರಹಗಾರರು, ವಕೀಲರು, ಕರ್ನಾಟಕ ಒನ್, ರಾಯಚೂರು ಒನ್, ಗ್ರಾಮ ಒನ್, ಮತ್ತು ಬಾಪೂಜಿ ಸೇವಾ ಕೇಂದ್ರ ವರ್ಗದವರು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಸತಿ ಸೌಲಭ್ಯಕ್ಕೆ ಮಾಜಿ ದೇವದಾಸಿ ಮಹಿಳೆಯರಿಂದ ಅರ್ಜಿ ಆಹ್ವಾನ

ನೆಟ್‌ಬಾಲ್‌ನಲ್ಲಿ ಚಿನ್ನ ಪಡೆದ ಸಾಹಿತ್ಯ ಗೊಂಡಬಾಳಗೆ ವಿಶೇಷ ಗೌರವ



ಕೊಪ್ಪಳ ,ಜ.30- ನಗರದ ಶ್ರೀ ಚೈತನ್ಯ ಸಮೂಹದ ಲೈಯನ್ಸ್ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನ ದ್ವಿತೀಯ ಪಿ.ಯು ವಿದ್ಯಾರ್ಥಿನಿ ಸಾಹಿತ್ಯ ಮಂಜುನಾಥ ಗೊಂಡಬಾಳ 19 ವರ್ಷದೊಳಗಿನ ಕರ್ನಾಟಕ ತಂಡಕ್ಕೆ ಆಡಿ ರಾಷ್ಟ್ರೀಯ ಶಾಲಾ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆಗೆ, ರಾಜ್ಯಕ್ಕೆ ಕೀರ್ತಿ ತಂದಿರುವುದಕ್ಕೆ ಪದವಿ ಪೂರ್ವ ಇಲಾಖೆ ವಿಶೇಷ ಗೌರವ ಸಲ್ಲಿಸುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಜಗದೀಶ ಅವರು ತಿಳಿಸಿದ್ದಾರೆ.

ಇತ್ತೀಚೆಗೆ ಮಂಗಳೂರಿನಲ್ಲಿ ಸ್ಕೂಲ್ ಗೇಮ್ಸ್ ಆಫ್ ಇಂಡಿಯಾ, ಕರ್ನಾಟಕ ಸರಕಾರ, ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಮತ್ತು ಸ್ವಾಮಿ ವಿವೇಕಾನಂದ ಪದವಿಪೂರ್ವ ಕಾಲೇಜು ಎಡಪದವುಗಳ ಆಶ್ರಯ ದಲ್ಲಿ ಜರುಗಿದ 19 ವರ್ಷದೊಳಗಿನ ಬಾಲಕ ಬಾಲಕಿಯರ ರಾಷ್ಟ್ರೀಯ ನೆಟ್‌ಬಾಲ್ ಕ್ರೀಡಾಕೂಟದಲ್ಲಿ 12 ಜನರ ಕರ್ನಾಟಕ ತಂಡದಲ್ಲಿ ಆಯ್ಕೆಯಾಗಿ, ಕ್ಯಾಂಪ್‌ನಲ್ಲಿ ತರಬೇತಿ ಹೊಂದಿ ಕರ್ನಾಟಕದ ಐತಿಹಾಸಿಕ ದಾಖಲೆಯ ಮೊದಲ ಬಾರಿ ಚಿನ್ನದ ಪದಕ ಗೆದ್ದ ತಂಡದಲ್ಲಿದ್ದು ಜಿಲ್ಲೆಗೆ, ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

ಸಂಗೀತ, ವೆಸ್ಟರ್ನ್ ನೃತ್ಯ, ಭರತನಾಟ್ಯ ಸೇರಿದಂತೆ ಗಿಟಾರ್ ವಾದನ, ಕೀಬೋರ್ಡ್, ಹಾರ್ಮೋನಿಯಂ ನುಡಿಸುವದು ಮತ್ತು ಮೌತ್ ಪಿಯಾನೋದಲ್ಲಿ ಪರಿಣತಿಯನ್ನು ಹಾಗೂ ಕ್ರೀಡಾ ಕ್ಷೇತ್ರದ ಸಾಧನೆ ಪರಿಗಣಿಸಿ ರಾಜ್ಯಮಟ್ಟದ ಬಾಲಗೌರವ ಪ್ರಶಸ್ತಿ ಪಡೆದಿರುವ ಕು. ಸಾಹಿತ್ಯ ಎಂ. ಗೊಂಡಬಾಳ, ಕೊಪ್ಪಳಕ್ಕೆ ಮೊದಲ ಸಲ ರಾಜ್ಯಮಟ್ಟದ ದಸರಾ ಸಿಎಂ ಕಪ್ ನೆಟ್‌ಬಾಲ್ ಕಂಚಿನ ಪದಕ, ಪೆಂಕಾಕ್ ಸಿಲತ್‌ನಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದ ಪದಕ ಪಡೆದಿರುವದನ್ನು ಪರಿಗಣಿಸಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವತಿಯಿಂದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸಚಿವರಾದ ಶಿವರಾಜ ತಂಗಡಗಿ, ಶಾಸಕರಾದ ರಾಘವೇಂದ್ರ ಹಿಟ್ನಾಳ, ಜಿಲ್ಲಾಽಕಾರಿ ಡಾ. ಸುರೇಶ ಇಟ್ನಾಳ ಮತ್ತು ಜಿ.ಪಂ. ಸಿಇಓ ವರ್ಣಿತ್ ನೇಗಿ ಅವರು ಸನ್ಮಾನ ಮಾಡಿದ್ದು, ವಿಶೇಷ ಗೌರವ ಮತ್ತು ಕ್ರೀಡಾ ಸಹಾಯಧನ ಕೊಡುವಂತೆ ಇಲಾಖೆಗೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಪತ್ರ ಬರೆಯಲಾಗುವುದು ಎಂದು ಉಪನಿರ್ದೇಶಕರ ಕಛೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಸುರಪುರ : ಪದವಿಪೂರ್ವ ಕಾಲೇಜುಗಳಿಗೆ ಡಿಡಿಪಿಐ ಪಂಡಿತರಾವ್ ದಿಢೀರ್ ಭೇಟಿ, ಪರಿಶೀಲನೆ

ಸುರಪುರ,ಜ.30- ನಗರದ ಪದವಿ ಪೂರ್ವ ಕಾಲೇಜುಗಳಿಗೆ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕರಾದ ಪಂಡಿತರಾವ್ ಆರ್ ಪವಾರ್ ಅವರು ಭೇಟಿ ನೀಡಿ ಪರಿಶೀಲನೆ ಮಾಡಿದರು. ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆ ನಡೆಯು ತ್ತಿದ್ದು, ವಿದ್ಯಾರ್ಥಿಗಳ ಪರೀಕ್ಷೆಯ ಸಿದ್ಧತೆಯ ಬಗ್ಗೆ ತಿಳಿದುಕೊಳ್ಳಲು ಭೇಟಿ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದ ಸುಧಾರಣೆಗಾಗಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ನೀಲನಕ್ಷೆ, ಮಾದರಿ ಪ್ರಶ್ನೆ ಪತ್ರಿಕೆಗಳ ಬಗ್ಗೆ ಮನನ ಮಾಡಿಸಬೇಕು. ಯಾವುದೇ ವಿದ್ಯಾರ್ಥಿ ಅನುತ್ತೀರ್ಣವಾಗದಂತೆ ಕನಿಷ್ಠ ಅಂಕಗಳನ್ನು ಪಡೆಯುವಂತೆ ಎಲ್ಲಾ ಉಪನ್ಯಾಸಕರು ಜವಾಬ್ದಾರಿ ವಹಿಸಿ ಉತ್ತಮ ಫಲಿತಾಂಶ ಬರು ವಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು. ಹಾಗೂ ವಿದ್ಯಾರ್ಥಿಗಳೊಂದಿಗೆ ಮಾತನಾಡಿ, ಗೊತ್ತಿರದ ವಿಷಯಗಳ ಬಗ್ಗೆ ಉಪನ್ಯಾಸಕರೊಂದಿಗೆ ಚರ್ಚಿಸಿ ಉತ್ತಮವಾಗಿ ಅಭ್ಯಾಸ ಮಾಡಿ ಪರೀಕ್ಷೆಗಳನ್ನು ಆತ್ಮವಿಶ್ವಾಸದಿಂದ ಎದುರಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪದವಿಪೂರ್ವ ಪ್ರಾಚಾರ್ಯರ ಸಂಘದ ಜಿಲ್ಲಾಧ್ಯಕ್ಷ ರಾದ ರುದ್ರಗೌಡ ಮಾಲಿ ಪಾಟೀಲ್, ಕಾಲೇಜಿನ ಪ್ರಾಚಾರ್ಯರಾದ ಮೋನಯ್ಯ ದೇವರಗೋನಾಲ, ಉಪನ್ಯಾಸಕ ಬಸವರಾಜ ಇನಾಮದಾರ, ಬಾಲಕರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸೋಫಿ ಸಾಬ್ ಗುತ್ತೇದಾರ, ಗಂಗಾಧರ್ ರುಮಾಲ್ ಸೇರಿದಂತೆ ಇನ್ನಿತರ ಉಪನ್ಯಾಸಕರು ಉಪಸ್ಥಿತರಿದ್ದರು.

ಫೆ. 1ರಂದು ಸಿದ್ಧರಾಮಾನಂದಪುರಿ ಶ್ರೀಗಳ ನುಡಿನಮನ ಕಾರ್ಯಕ್ರಮ

ಯಾದಗಿರಿ,ಜ.30- ತಿಂಥಣಿ ಬ್ರಿಡ್ಜ್‌ನ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಪರಮಪೂಜ್ಯ ಶ್ರೀ ಸಿದ್ದರಾಮಾನಂದ ಪುರಿ ಸ್ವಾಮೀಜಿ ಅವರ ನುಡಿನಮನ ಕಾರ್ಯಕ್ರಮ ಫೆಬ್ರುವರಿ 1ರಂದು ಆಯೋಜಿಸಲಾಗಿದೆ ಎಂದು ಗುರುಪೀಠದ ಧರ್ಮದರ್ಶಿ (ಟ್ರಸ್ಟಿ) ಡಾ. ಭೀಮಣ್ಣ ಮೇಟಿ ಹೇಳಿದರು. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಹಿಂದೆ ಜನವರಿ 31ರಂದು ನುಡಿನಮನ ಕಾರ್ಯಕ್ರಮ ಆಯೋಜಿಸಲಾ ಗಿತ್ತು. ಆದರೆ ಅಂದು ಬರೀ ಪುಣ್ಯಾರಾಧನೆ ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ. ಫೆಬ್ರುವರಿ 1ರಂದು ಬೆಳಿಗ್ಗೆ 10ರಿಂದ ಸಂಜೆ 4ರ ವರೆಗೆ ಗುರುಪೀಠದ ಆವರಣದಲ್ಲಿ ನಡೆಯುವ ನುಡಿ ನಮನ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಸಚಿವರು ಮತ್ತು ಶಾಸಕರು ಭಾಗವಹಿಸಲಿದ್ದಾರೆ. ತಿಂಥಣಿ ಬ್ರಿಡ್ಜ್‌ನಲ್ಲಿ ಕನಕ ಗುರುಪೀಠ ಸ್ಥಾಪಿಸುವ ಮೂಲಕ ಶ್ರೀಗಳು ಹಾಲುಮತ ಉತ್ಸವ ಮಾಡಿ ನಾಡಿನಲ್ಲಿ ಹೆಸರುವಾಸಿಯಾಗಿದ್ದರು. ಅನೇಕ ಧಾರ್ಮಿಕ ಕಾರ್ಯಕ್ರಮ ಗಳು ಮಾಡಿದ್ದಾರೆ. ಇದಲ್ಲದೇ 220 ವಿದ್ಯಾರ್ಥಿಗಳ ವಸತಿ ಸಹಿತ ಶಾಲೆ ನಡೆಸುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ನಿಮ್ಮೂರು ಸುದ್ದಿ

ಸಂಪಾದಕೀಯ

ಬೆಂಗಳೂರೆಂಬ ಸಿಲಿಕಾನ್ ಸಿಟಿಯೂ, ಸಂಚಾರ ದಟ್ಟಣೆ ಎಂಬ ನರಕವೂ



ಬೆಂಗಳೂರು ನಗರ ಸಂಚಾರ ದಟ್ಟಣೆಯನ್ನು ನಿವಾರಿಸಲು ಸರ್ಕಾರ ಕಠಿಣ ರಾಜಕೀಯ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾದ ಅಗತ್ಯವಿದೆ. ಹಾಗೆಯೇ ಜನ ಕೂಡ ಶಿಸ್ತು, ಸಂಚಾರ ನಿಯಮ, ನಾಗರಿಕ ಪ್ರಜ್ಞೆ, ಕಾನೂನು ಪಾಲನೆ ಬಗ್ಗೆ ಅರಿತು ಪಾಲಿಸಬೇಕಾಗಿದೆ.

ಕಳೆದ ಮಂಗಳವಾರ ರಾಜ್ಯ ಕಾಂಗ್ರೆಸ್ ಸರ್ಕಾರ, ತಾನೇ ಕರೆದಿದ್ದ ವಿಶೇಷ ಅಧಿವೇಶನಕ್ಕೆ ಗೈರು ಹಾಜರಾಗಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಿ ರಾಮ್ ಜಿ ಕಾಯ್ದೆ ವಿರುದ್ಧ ಪ್ರತಿಭಟಿಸಲು ಬೀದಿಗೆ ಇಳಿದಿತ್ತು. ಬೃಹತ್ ಸಮಾವೇಶಕ್ಕಾಗಿ ನಗರದ ಹೃದಯ ಭಾಗದಲ್ಲಿರುವ ಸ್ವಾತಂತ್ರ್ಯ ಉದ್ಯಾನವನ್ನು ಆಯ್ಕೆ ಮಾಡಿಕೊಂಡಿತ್ತು. ಆಡಳಿತದಲ್ಲಿರುವ ಪಕ್ಷವಾದ್ದರಿಂದ ಮುಖ್ಯಮಂತ್ರಿಗಳಿಂದ ಹಿಡಿದು ಸಾಮಾನ್ಯ ಕಾರ್ಯಕರ್ತರವರೆಗೆ, ವಿವಿಧ ಜಿಲ್ಲೆಗಳಿಂದ ಜನಸಾಗರವೇ ನಗರಕ್ಕೆ ಹರಿದು ಬಂದಿತ್ತು.

ಭಾರಿ ಜನಸ್ತೋಮದ ಕಾರಣ ಮೆಜೆಸ್ಟಿಕ್ ಹಾಗೂ ಸ್ವಾತಂತ್ರ್ಯ ಉದ್ಯಾನದ ಸುತ್ತಮುತ್ತಲ ರಸ್ತೆಗಳಲ್ಲಿ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತು. ವಾಹನ ಸವಾರರು ಹೈರಾಣರಾದರು. ಕಚೇರಿ, ವ್ಯಾಪಾರ ಹಾಗೂ ವೈಯಕ್ತಿಕ ಕೆಲಸಕ್ಕೆ ಹೊರಟಿದ್ದ ನಗರವಾಸಿಗಳಿಗೆ ದಟ್ಟಣೆ ಬಿಸಿ ತಟ್ಟಿತು. ತುರ್ತು ಚಿಕಿತ್ಸೆ ಗೊಳಗಾಗಬೇಕಾದ ರೋಗಿಗಳು, ಆಂಬುಲೆನ್ಸ್ ಗಳ ಸ್ಥಿತಿಯಂತೂ ಹೇಳತೀರದಾಗಿತ್ತು. ಸಂಚಾರ ಸುಗಮಗೊಳಿಸಲು ಪೊಲೀಸರ ಪರದಾಟ, ಅವರ ಸಹನೆಗೆ ಸವಾಲಾಗಿತ್ತು.

ನಗರ ಸಂಚಾರವನ್ನು ಸುಗಮಗೊಳಿಸಬೇಕಾದ, ನಗರ ಜೀವನವನ್ನು ಸಹ್ಯಗೊಳಿಸಬೇಕಾದ ಸರ್ಕಾರವೇ ಪ್ರತಿಭಟನೆ, ಸಮಾವೇಶಗಳನ್ನು ಹಮ್ಮಿಕೊಂಡು ಅಧ್ವಾನವೆಬ್ಬಿಸಿದರೆ ಯಾರನ್ನು ದೂರುವುದು? ನಗರದ ಸಾಮಾನ್ಯ ಪ್ರಜೆ ಮನೆ ಬಿಟ್ಟು ರಸ್ತೆಗಿಳಿದರೆ, ಅವನಿಗೆ ಎದುರಾಗುವ ಕಷ್ಟಗಳೇನು, ಸಮಸ್ಯೆಗಳೇನು ಎನ್ನುವುದು ನಾವೇ ಆಯ್ಕೆ ಮಾಡಿಕೊಂಡ ಜನಪ್ರತಿನಿಧಿಗಳಿಗೆ- ಸರ್ಕಾರಕ್ಕೆ- ಅರ್ಥವಾಗದಿದ್ದರೆ, ಹರ ಕೊಲ್ಲಲ್ ಪರ ಕಾಯ್ವನೇ?

ಇದೇ ಸಂದರ್ಭದಲ್ಲಿ ನೆದರ್ಲೆಂಡ್ಸ್ ಮೂಲದ ಟಾಮ್ ಟಾಮ್ ಸಂಸ್ಥೆ 2025ರ ಸಂಚಾರ ಸೂಚ್ಯಂಕ(ಟ್ರಾಫಿಕ್ ಇಂಡೆಕ್ಸ್) ವರದಿ ಬಿಡುಗಡೆ ಮಾಡಿದೆ. ಆ ವರದಿಯ ಪ್ರಕಾರ ಸಂಚಾರ ದಟ್ಟಣೆ ಪಟ್ಟಿಯಲ್ಲಿ ಮೆಕ್ಸಿಕೊ ನಗರ ಮೊದಲ ಸ್ಥಾನದಲ್ಲಿದ್ದರೆ, ಸಿಲಿಕಾನ್ ಸಿಟಿ ಬೆಂಗಳೂರು ಎರಡನೇ ಸ್ಥಾನದಲ್ಲಿದೆ. ಇದಕ್ಕೆ ಕಾರಣ ನಗರದಲ್ಲಿ ವಾಹನಗಳ ಸಂಖ್ಯೆ ತೀವ್ರವಾಗಿ ಹೆಚ್ಚಳವಾಗುತ್ತಿರುವುದು. ವಾಹನಗಳಿಗೆ ತಕ್ಕಂತೆ ರಸ್ತೆಗಳ ವಿಸ್ತರಣೆಯಾಗದಿರುವುದು ಮತ್ತು ಸಾರ್ವಜನಿಕ ಸಾರಿಗೆಯ ಬಳಕೆ ಕಡಿಮೆಯಾಗಿರುವುದು.

ಬೆಂಗಳೂರು ನಗರದಲ್ಲಿ 10 ಕಿಲೋಮೀಟರ್ ದೂರ ಕ್ರಮಿಸಲು ಸರಾಸರಿ 40 ನಿಮಿಷ ಬೇಕಾಗುತ್ತದೆ; ಕೆಲವು ಸಲ ಒಂದು ಗಂಟೆಯನ್ನೂ ಮೀರುತ್ತದೆ ಎಂದು ವರದಿ ತಿಳಿಸಿದೆ. ಬೆಂಗಳೂರು ವಿಶ್ವದ ಪ್ರಮುಖ ಐಟಿ ನಗರವಾಗಿರುವುದರ ಜೊತೆಗೆ, ಸಂಚಾರ ದಟ್ಟಣೆಯಲ್ಲೂ ಮುಂಚೂಣಿಯಲ್ಲಿದೆ. ಜಾಗತಿಕ ಮಟ್ಟದಲ್ಲಿ ಕುಖ್ಯಾತಿ ಗಳಿಸುತ್ತಿದೆ. ಅದು ಬೆಂಗಳೂರು ನಗರ ಅಭಿವೃದ್ಧಿ ಖಾತೆಯ ಕಾರ್ಯವೈಖರಿ ಕುರಿತು ಅಸಮಾಧಾನ, ಆಕ್ರೋಶಕ್ಕೂ ಕಾರಣವಾಗುತ್ತದೆ.

ನಗರ ಸಂಚಾರ ದಟ್ಟಣೆಗೆ ಕಾರಣಗಳನ್ನು ಹುಡುಕಿದರೆ, ಅದು ಸರ್ಕಾರ ಮತ್ತು ಜನ- ಇಬ್ಬರನ್ನೂ ಅಪರಾಧಿ ಸ್ಥಾನದಲ್ಲಿ ನಿಲ್ಲಿಸುತ್ತದೆ. ಅಭಿವೃದ್ಧಿ, ಕಾಮಗಾರಿ, ತೆರಿಗೆಯ ಆಸೆಗೆ ಬಿದ್ದ ಸರ್ಕಾರ, ಹೊಸ ವಾಹನಗಳ ನೋಂದಣಿಗೆ ಕಡಿವಾಣ ಹಾಕುವುದಿಲ್ಲ. ಜನ ಸ್ವಂತ ವಾಹನಗಳ ಮೇಲಿನ ಅತಿಯಾದ ಅವಲಂಬನೆ ಕಡಿಮೆಯಾಗುತ್ತಿಲ್ಲ. ಪರ್ಯಾಯ ಸಾರ್ವಜನಿಕ ಸಾರಿಗೆ ವ್ಯವಸ್ಥೆಯತ್ತ ಸರ್ಕಾರ ಗಮನ ಹರಿಸುತ್ತಿಲ್ಲ. ವಾಹನ ಸವಾರರಿಗೆ ನಾಗರಿಕ ಪ್ರಜ್ಞೆ(ಸಿವಿಕ್ ಸೆನ್ಸ್)ಯ ಪರಿವೇ ಇಲ್ಲ. ಇವೆಲ್ಲವೂ ಸೇರಿ ಸಂಚಾರ ವ್ಯವಸ್ಥೆ ಸಂಪೂರ್ಣವಾಗಿ ಅಸ್ತವ್ಯಸ್ತಗೊಂಡಿದೆ. ನಗರ ಬದುಕು ದಿನದಿಂದ ದಿನಕ್ಕೆ ನರಕವಾಗುತ್ತಿದೆ.

ಒಂದು ಅಂದಾಜಿನ ಪ್ರಕಾರ ಪ್ರತಿನಿತ್ಯ ಸುಮಾರು 3ರಿಂದ 4 ಸಾವಿರ- ದ್ವಿಚಕ್ರ, ಕಾರು, ಬಾಡಿಗೆ ವಾಹನಗಳು ನೋಂದಣಿಯಾಗಿ ನಗರದ ರಸ್ತೆಗಳಿಗೆ ಇಳಿಯುತ್ತಿವೆ. ಆದರೆ ಆ ವಾಹನಗಳಿಗೆ ತಕ್ಕಂತೆ ರಸ್ತೆ ಮೂಲಸೌಕರ್ಯವಿಲ್ಲ. ಅಕಸ್ಮಾತ್ ಇದ್ದರೂ ಗುಂಡಿಗಳಿಂದ ಮುಕ್ತವಾಗಿಲ್ಲ. ಅಭಿವೃದ್ಧಿಯ ನೆಪದಲ್ಲಿ ರಸ್ತೆ ಅಗೆಯುವುದು ನಿಂತಿಲ್ಲ. ಜೊತೆಗೆ ವೇಗವಾಗಿ ವಿಸ್ತರಿಸುತ್ತಿರುವ ಮಹಾನಗರಕ್ಕೆ ಸರ್ಕಾರದಿಂದ ಸಮರ್ಪಕ ಯೋಜನೆ ರೂಪಿಸಲು ಸಾಧ್ಯವಾಗುತ್ತಿಲ್ಲ. ಮೂಲಸೌಕರ್ಯ ಯೋಜನೆಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸುತ್ತಿಲ್ಲ. ಈ ಎಲ್ಲ ಕಾರಣಗಳು ಸಂಚಾರ ದಟ್ಟಣೆಯೊಂದಿಗೆ ತಳುಕು ಹಾಕಿಕೊಂಡಿವೆ.

ಉತ್ತಮ ಹವಾಮಾನ, ಕಾಸ್ಮೊ ಕಲ್ಚರ್ ಸಿಲಿಕಾನ್ ಸಿಟಿ ಎಂಬ ಹೆಸರು ಗಳಿಸಿದ್ದರೂ, ರೇಜಿಗೆ ಹಿಡಿಸುವಷ್ಟು ಸಂಚಾರ ದಟ್ಟಣೆ ಬೆಂಗಳೂರಿಗೆ ಕೆಟ್ಟ ಹೆಸರು ತರುತ್ತಿದೆ. ಈ ನಿಟ್ಟಿನಲ್ಲಿ ಕಾರ್ಯಮಗ್ನರಾಗಬೇಕಾದ ಬೆಂಗಳೂರು ನಗರ ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್, ಅದಕ್ಕೆ ವ್ಯತಿರಿಕ್ತವಾದ ಮುಂದಿನ 25 ವರ್ಷಕ್ಕೆ ಅಗತ್ಯವಿರುವ ಸಂಚಾರಿ ಮಾರ್ಗದ ಯೋಜನೆ ಕುರಿತು ಕನಸು ಬಿಚ್ಚಿಟ್ಟಿದ್ದಾರೆ. ಸಂಚಾರ ದಟ್ಟಣೆ ನಿಯಂತ್ರಿಸಬೇಕು ಎಂಬ ಕಾರಣಕ್ಕೆ ಬೆಂಗಳೂರಿನ ಮೂಲಭೂತ ಸೌಕರ್ಯ ಅಭಿವೃದ್ಧಿಗೆ 2.50 ಲಕ್ಷ ಕೋಟಿ ಹಣವನ್ನು ಐದು ವರ್ಷಗಳಲ್ಲಿ ವೆಚ್ಚ ಮಾಡಲಾಗುವುದು. ಅದಕ್ಕಾಗಿ ಬೆಂಗಳೂರು ಬಿಸಿನೆಸ್ ಕಾರಿಡಾರ್ ನಿರ್ಮಿಸಲಾಗುವುದು. ಇದರ ಜೊತೆಗೆ ಟನಲ್ ರಸ್ತೆಗಳು, 123 ಕಿ.ಮೀ ಎಲಿವೇಟೆಡ್ ಕಾರಿಡಾರ್ಗಳು, 300 ಕಿ.ಮೀ ಉದ್ದದ ಬಫರ್ ರೋಡ್‌ಗಳನ್ನು ನಿರ್ಮಿಸಲಾಗುವುದು ಎಂದಿದ್ದಾರೆ.

ಈ ಹೂಡಿಕೆ ಗಮನಾರ್ಹವಾದರೂ, ಮೂಲಸೌಕರ್ಯ ವಿಸ್ತರಣೆ ಮಾತ್ರದಿಂದಲೇ ನಗರ ಸಂಚಾರ ಸಮಸ್ಯೆ ನಿವಾರಣೆಯಾಗುವುದಿಲ್ಲ ಎಂಬುದನ್ನೂ ಸಚಿವರು ಅರಿಯಬೇಕಿದೆ. ಏಕೆಂದರೆ, ಅತ್ಯಾಧುನಿಕ ಯಂತ್ರೋಪಕರಣಗಳು ಲಭ್ಯವಿರುವಾಗ ವೈಟ್ ಟಾಪಿಂಗ್‌ನಂತಹ ರಸ್ತೆಗಳ ಕಾಮಗಾರಿಗಳೇ ವರ್ಷಗಟ್ಟಲೆ ಸಮಯ ತಿನ್ನುತ್ತಿವೆ. ಇನ್ನು ಟನಲ್ ರಸ್ತೆ, ಮೆಟ್ರೋ ವಿಸ್ತರಣೆ ಮತ್ತು ಉಪನಗರ ರೈಲು ಮೊದಲಾದ ದೊಡ್ಡ ದೊಡ್ಡ ಯೋಜನೆಗಳು ಜನಬಳಕೆಗೆ ಸಿಗಬೇಕಾದರೆ ಎಷ್ಟು ಸಮಯವಾಗಬಹುದು?

ಹಾಗಾಗಿ ಬೆಂಗಳೂರಿಗೆ ಬೇಕಿರುವುದು ತುರ್ತು ಕ್ರಮ, ಕಟ್ಟುನಿಟ್ಟಾದ ಅನುಷ್ಠಾನ ಮತ್ತು ಕ್ರಿಯಾಶೀಲ ದೂರದೃಷ್ಟಿ. ನಗರ ಸಂಚಾರ ದಟ್ಟಣೆಯನ್ನು ನಿವಾರಿಸಲು ಸರ್ಕಾರ ನಿರ್ಣಾಯಕ ಕ್ರಮ ಕೈಗೊಳ್ಳಬೇಕಾಗಿದೆ. ಆ ನಿಟ್ಟಿನಲ್ಲಿ ಕಠಿಣ ರಾಜಕೀಯ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾದ ಅಗತ್ಯವಿದೆ. ಹಾಗೆಯೇ ಜನ ಕೂಡ ಶಿಸ್ತು, ಸಂಚಾರ ನಿಯಮ, ನಾಗರಿಕ ಪ್ರಜ್ಞೆ, ಕಾನೂನು ಪಾಲನೆ ಬಗ್ಗೆ ಅರಿತು ಪಾಲಿಸಬೇಕಾಗಿದೆ. ಬೆಂಗಳೂರನ್ನು ಎಲ್ಲರೂ ಬದುಕುವ ನಗರವನ್ನಾಗಿ ರೂಪಿಸಬೇಕಿದೆ.

ಸಿಎಂ, ಡಿಸಿಎಂ ವಿರುದ್ಧ ಮಾನಹಾನಿಕರ ಪೋಸ್ಟ್: ಬಿಜೆಪಿ ಎಕ್ಸ್ ಖಾತೆ ವಿರುದ್ಧ ದೂರು ದಾಖಲು

ಬೆಂಗಳೂರು,ಜ.30-

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಇತರ ಸಚಿವರನ್ನು ಗುರಿಯಾಗಿಸಿಕೊಂಡು ಎಕ್ಸ್ ಖಾತೆಯಲ್ಲಿ ಮಾನಹಾನಿಕರ ಪೋಸ್ಟ್ ಪ್ರಕಟಿಸಿರುವ ಕುರಿತು ಬಿಜೆಪಿ ಎಕ್ಸ್ ಖಾತೆ ವಿರುದ್ಧ ದೂರು ದಾಖಲಾಗಿರುವುದಾಗಿ ವರದಿಯಾಗಿದೆ.

ಬಿಜೆಪಿಯ ಅಧಿಕೃತ ಎಕ್ಸ್ ಖಾತೆಯಲ್ಲಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ ರಾಜ್ಯ ಸರ್ಕಾರದ ಇತರ ಸಚಿವರನ್ನು ''ಸ್ಕ್ಯಾಮ್ ಲಾರ್ಡ್'' ಎಂದು ಉಲ್ಲೇಖಿಸಿ ಮಾನಹಾನಿಕರ ಪೋಸ್ಟ್ ಹಂಚಿಕೊಳ್ಳಲಾಗಿದೆ ಎಂದು ಆರೋಪಿಸಲಾಗಿದೆ.

ಈ ಬಗ್ಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯನ್ನು ಪ್ರತಿನಿಧಿಸುವ ವಕೀಲರ ತಂಡವು ಬೆಂಗಳೂರಿನ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ದಾಖಲಿಸಿದೆ ಎಂದು ತಿಳಿದುಬಂದಿದೆ.

ಸ್ಕ್ಯಾಮ್ ಲಾರ್ಡ್ ಎಂಬ ಶೀರ್ಷಿಕೆಯ ಪೋಸ್ಟ್‌ನಲ್ಲಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಇತರ ಸಚಿವರ ಚಿತ್ರಗಳನ್ನು ಬಳಸಲಾಗಿದ್ದು, ''ಇದು ಹಗರಣಗಳ ಕಥೆಯಲ್ಲ, ಅವರ ಹಿಂದಿನವರ ಕಥೆ'' ಎಂಬ ವ್ಯಂಗ್ಯಾತ್ಮಕ ವಾಕ್ಯವನ್ನು ಸೇರಿಸಲಾಗಿದೆ. ಇದು ಕರ್ನಾಟಕವನ್ನು ಹಗಲು-ರಾತ್ರಿ ಲೂಟಿ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ಹಗರಣ ಸಾಮ್ರಾಜ್ಯದ ನಿಜವಾದ ಕಥೆ ಎಂದು ಬಿಜೆಪಿ ಹೇಳಿದೆ.

ಬಿಜೆಪಿ ಲೂಟಿ ಮತ್ತು ಸ್ಕ್ಯಾಮ್ ಎಂಬ ಪದಗಳನ್ನು ಪದೇಪದೇ ಬಳಸುವ ಮೂಲಕ ಸಾರ್ವಜನಿಕರಲ್ಲಿ ಗೊಂದಲ ಹಾಗೂ ತಪ್ಪು ಕಲ್ಪನೆ ಮೂಡಿಸಲು ಪ್ರಯತ್ನಿಸುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದು ಕೇವಲ ರಾಜಕೀಯ ಟೀಕೆಯಲ್ಲ; ಸಂವಿಧಾನಾತ್ಮಕ ಹುದ್ದೆಗಳನ್ನು ಹೊಂದಿರುವ ವ್ಯಕ್ತಿಗಳ ಗೌರವ ಮತ್ತು ವ್ಯಕ್ತಿತ್ವವನ್ನು ಅವಹೇಳನ ಮಾಡುವ ವ್ಯವಸ್ಥಿತ ಪಿತೂರಿಯಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ.

ಸಮಾಜದ ಶಾಂತಿ ಮತ್ತು ಸೌಹಾರ್ದತೆಯನ್ನು ಕದಡುವ ಇಂತಹ ಪೋಸ್ಟ್‌ಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದ್ದಾರೆ ಎಂದು ತಿಳಿದು ಬಂದಿದೆ.

ಜಾತಿ ಸರ್ವಾಧಿಕಾರಕ್ಕೆ ಸೆಡ್ಡು ಒಡೆಯುವ ಸಿನಿಮಾ ಲ್ಯಾಂಡ್‌ಲಾರ್ಡ್



ಸಿನಿಮಾದಲ್ಲಿ ದೇವದಾಸಿ ಪದ್ಧತಿ ಕುರಿತು ತೋರಿಸಲಾಗಿದೆ. ವಾಸ್ತವದಲ್ಲಿ ಅದಕ್ಕಿಂತ ನೂರು ಪಟ್ಟು ಕರಾಳವಾಗಿ ಇದೆ. ಅದನ್ನು ಇನ್ನೂ ಪರಿಣಾಮಕಾರಿಯಾಗಿ ತೋರಿಸಬೇಕಿತ್ತು ಅನ್ನೋದು ನನ್ನ ಅಭಿಪ್ರಾಯ. ಆದ್ರೆ ಇಷ್ಟು ತೋರಿಸುವ ಪ್ರಯತ್ನ ಮಾಡಿರುವುದು ಶ್ಲಾಘನೀಯ.

ಜಗತ್ತು ತುಂಬಾ ಮುಂದುವರೆದಿದೆ, ಮುಂದುವರೆಯುತ್ತಿದೆ. ಭಾರತದ ಗ್ರಾಮೀಣ ಭಾಗಗಳಲ್ಲಿ ಜಮೀನ್ದಾರಿ ಪದ್ಧತಿ ಮತ್ತು ಜಾತಿ ವ್ಯವಸ್ಥೆಯ ವಿಷದ ಬೇರುಗಳು ಎಷ್ಟು ಆಳವಾಗಿವೆ ಎಂಬುದನ್ನು ನೆನಪಿಸುವ ಪ್ರಯತ್ನವೇ ಲ್ಯಾಂಡ್‌ಲಾರ್ಡ್. ಸಂವಿಧಾನದ ಸಮಾನತೆಯ ಹಕ್ಕು ಮತ್ತು ಶೋಷಿತರ ಬದುಕಿನ ಸಂಘರ್ಷವನ್ನು ಈ ಸಿನಿಮಾ ಮುನ್ನೆಲೆಗೆ ತರುವ ಪ್ರಯತ್ನ ಮಾಡಿದೆ.

ಲ್ಯಾಂಡ್‌ಲಾರ್ಡ್ ಸಿನಿಮಾ ಕೋಲಾರ ಜಿಲ್ಲೆಯ ಒಂದು ಭಾಗದ ಕಥೆಯಾದರೂ, ವಾಸ್ತವದಲ್ಲಿ ಕರ್ನಾಟಕಕ್ಕೆ ಮತ್ತು ಕನ್ನಡ ಚಿತ್ರರಂಗಕ್ಕೆ ಅವಶ್ಯವುಳ್ಳ ಸಿನಿಮಾವಾಗಿದೆ. ತಳಸಮುದಾಯಗಳ ನೋವು, ಮಹಿಳೆಯರ ಆರ್ತನಾದ, ಸಂವಿಧಾನದ ಆಶಯ ಸೇರಿದಂತೆ ಮಾನವೀಯ ಮೌಲ್ಯಗಳು ಹಾಗೂ ಬಲಿಷ್ಠರ ದೌರ್ಜನ್ಯ, ದಬ್ಬಾಳಿಕೆ, ಜಾತಿವಾದಿಗಳ ಜಾತಿವಾದದಂತಹ ಅಮಾನವೀಯ ಅಂಶಗಳನ್ನು ತೋರಿಸುವಲ್ಲಿ ಕನ್ನಡದ ಸಿನಿಮಾಗಳು ಸೋತಿದ್ದವು. ಆ ಜಾಗವನ್ನು ಲ್ಯಾಂಡ್‌ಲಾರ್ಡ್ ಸಿನಿಮಾ ತುಂಬಿದೆ.

ಜಾತಿವಾದಿಗಳಿಗೆ, ಬಲಿಷ್ಠರಿಗೆ ಸಿನಿಮಾ ಮೇಕಿಂಗ್ ಚೆನ್ನಾಗಿ ಮೂಡಿ ಬಂದಿಲ್ಲ, ಕ್ಯಾಮೆರಾ ಕೋನಗಳು ಸರಿಯಾಗಿ ಕಾಣಲ್ಲ, ಹಿನ್ನೆಲೆ ಮ್ಯೂಸಿಕ್ ವರ್ಸ್ಟ್ ಆಗಿದೆ. ಏಕೆಂದರೆ, ಅವರ ಹೊಟ್ಟೆಗೆ ಬೆಂಕಿ ಬಿದ್ದಿದೆ. ಲ್ಯಾಂಡ್‌ಲಾರ್ಡ್ ಬಗ್ಗೆ ಯಾರಾದ್ರೂ ಎರಡು ಒಳ್ಳೆ ಮಾತು ಹೇಳ್ತಾರೆ ಅಂದ್ರೇ, ಅವರು ಮನುಷ್ಯರಾಗಿರುತ್ತಾರೆ. ಹೌದು, ಕನ್ನಡ ಚಿತ್ರರಂಗದಲ್ಲಿ ಈ ತರದ ಒಂದು ಪ್ರಯತ್ನ ಇಲ್ಲಿಯವರೆಗೆ ನಡೆಯುವಲ್ಲಿ ವಿಫಲವಾಗಿತ್ತು. ಕಾಟೇರಾ ನಂತರ, ಕನ್ನಡದಲ್ಲಿ ಇಂತದೊಂದು ಸಿನಿಮಾ ಬಂದಿರುವುದು ಸಂತಸದ ವಿಷಯ.

ಸಿನಿಮಾವೆಂದರೆ ಕೇವಲ ಮನರಂಜನೆ, ಫೈಟ್, ಆಕ್ಷನ್, ಲವ್, ದಾದಾಗಿರಿ ಮಾತ್ರವಲ್ಲ, ಸಮಾಜದಲ್ಲಿ ವಾಸ್ತವದ ನೋವುಗಳಿಗೆ ಬೆಳಕು ಚೆಲ್ಲುವುದು. ಸಿನಿಮಾ ಜನರನ್ನು ಬೇಗನೆ ತಲುಪಬಲ್ಲ ಮಾಧ್ಯಮವಾಗಿರುವುದರಿಂದ, ಸಮಾಜದಲ್ಲಿ ಬದಲಾವಣೆ ತರಬಲ್ಲ ಅಂಶಗಳನ್ನು ಅದರೊಳಗೆ ಸೇರಿಸುವುದು ಅಗತ್ಯ.

ಪ್ರಸ್ತುತ ಸಿನಿಮಾಗಳು ಹಣ ಹಾಗೂ ಪ್ರಚಾರದ ಹಿಂದೆ ಬಿದ್ದಿವೆ. ಮೌಲ್ಯಗಳ ಹಿಂದೆ ಅಲ್ಲ. ಕನ್ನಡ ಚಿತ್ರರಂಗದಲ್ಲಿ ಜೈಭೀಮ್ ಅಥವಾ ಸಂವಿಧಾನದ ಹೆಸರು ಹೇಳುವ ಧೈರ್ಯ ಯಾವೊಬ್ಬ ನಟರು ಮಾಡುತ್ತಿಲ್ಲ. ಆದರೆ ಆ ಕೆಲಸವನ್ನು ದುನಿಯಾ ವಿಜಯ್ ಮಾಡುತ್ತಿದ್ದಾರೆ, ಹೀಗಾಗಿ ಈ ವಿಷಯದಲ್ಲಿ ಅದನ್ನು ಪ್ರಶಂಸೆ ಮಾಡಬೇಕು. ಒಂದ್ವೇಳೆ ಅವರು ತಪ್ಪು ಮಾಡಿದ್ರೆ ವಿಮರ್ಶೆ ಕೂಡ ಮಾಡ್ಬೇಕು.

ಲ್ಯಾಂಡ್‌ಲಾರ್ಡ್ ಸಿನಿಮಾ ಬಗ್ಗೆ ತುಂಬಾ ಚರ್ಚೆ ಆಗುತ್ತಿದೆ. ಹಾಗಾದರೆ ಸಿನಿಮಾದಲ್ಲಿ ಅಂತದು ಏನಿದೆ?

ಮೂಡಿಬಂದಿವೆ. ಕೆಲ ಸನ್ನಿವೇಶಗಳು ಪ್ರೇಕ್ಷಕರನ್ನು ಗೊಂದಲಮಯ ಮಾಡಿದರು, ಅದೇ ಚಿತ್ರದ ಶಕ್ತಿ.

ಹಿನ್ನೆಲೆ ಸಂಗೀತ ಕಥೆಗೆ ತಕ್ಕಂತೆ ಗಂಭೀರವಾಗಿದೆ. ಹಿನ್ನೆಲೆ ಸಂಗೀತ, ಕೇಳಲು ತುಂಬಾ ಆಸಕ್ತಿದಾಯಕವಾಗಿದೆ. ಹಾಡುಗಳು ಕಡಿಮೆ ಇದ್ದರೂ, ದೃಶ್ಯಗಳಿಗೆ ಪೂರಕವಾಗಿ ಕೆಲಸ ಮಾಡುತ್ತವೆ. ಛಾಯಾಗ್ರಹಣ ಗ್ರಾಮೀಣ ಬದುಕಿನ ಕಠಿಣತೆಯನ್ನು ಚೆನ್ನಾಗಿ ಸೆರೆ ಹಿಡಿದಿದೆ.

ಸಿನಿಮಾದಲ್ಲಿ ಮುಖ್ಯವಾಗಿ ಸಂವಿಧಾನದ ಆಶಯಗಳನ್ನು ಪ್ರಮುಖವಾಗಿ ಬಳಸಿಕೊಳ್ಳಲಾಗಿದೆ. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬ ಪವಿತ್ರ ಗ್ರಂಥದ ಸಾಲುಗಳು, ಹಳ್ಳಿಯ ಕಟ್ಟೆಗಳ ಮೇಲೆ ನಡೆಯುವ ಜಮೀನ್ದಾರಿಗಳ ಅನ್ಯಾಯದ ತೀರ್ಪುಗಳ ಹೇಗಿರುತ್ತವೆ ಎಂಬುದನ್ನು ನಿರ್ದೇಶಕ ಜಡೇಶ್ ಹಂಪಿ ತೋರಿಸಲು ಪ್ರಯತ್ನಿಸಿದ್ದಾರೆ. ರಾಚಯ್ಯನ ಹೋರಾಟ ಕೇವಲ ವೈಯಕ್ತಿಕವಲ್ಲ, ಅದು ಒಂದು ವ್ಯವಸ್ಥೆಯ ವಿರುದ್ಧದ ಬಂಡಾಯವಾಗಿದೆ ಎನ್ನುವುದನ್ನು ಸಿನಿಮಾದ ಕಥೆ ಸಾರುತ್ತದೆ.

ದೇವದಾಸಿ ಪದ್ಧತಿಯ ಕರಾಳತೆಯ ಕುರಿತು ಕೂಡ ಇಲ್ಲಿ ತೋರಿಸಿದ್ದಾರೆ. ದೇವದಾಸಿ ಮಹಿಳೆಯನ್ನು ಬಳಸಿಕೊಂಡು ಅವಳಿಗೆ ಮಗು ಹುಟ್ಟುತ್ತದೆ ಎನ್ನುವ ಕಾರಣಕ್ಕೆ ಜಾತಿವಾದಿ ಜಮೀನ್ದಾರ ಅವಳನ್ನು ಕೊಲ್ಲುವುದು ಹಾಗೂ ಬಲವಂತವಾಗಿ ಮಹಿಳೆಯರನ್ನು ದೇವದಾಸಿ ಪದ್ಧತಿ ದೂಡುವಂತ ಕೆಲವು ಅಂಶಗಳನ್ನು ಸಿನಿಮಾದಲ್ಲಿ ಬಿಚ್ಚಿಟ್ಟಿದ್ದಾರೆ. ಒಂದೇನೆಂದರೆ ಸಿನಿಮಾದಲ್ಲಿ ದೇವದಾಸಿ ಪದ್ಧತಿ ಕುರಿತು ತೋರಿಸಲಾಗಿದೆ. ಅದು ವಾಸ್ತವದಲ್ಲಿ ನೂರುಪಟ್ಟು ಕರಾಳವಾಗಿ ಇದೆ. ಅದನ್ನು ಸರಿಯಾಗಿ ಕವರ್ ಆಗ್ಬೇಕಿತ್ತು ಅನ್ನೋದು ನನ್ನ ಅಭಿಪ್ರಾಯ. ಆದ್ರೆ ಇಷ್ಟು ತೋರಿಸುವ ಪ್ರಯತ್ನ ಮಾಡಿರುವುದು ಶ್ಲಾಘನೀಯ.

ಮುಂದುವರೆದು ಸಿನಿಮಾದಲ್ಲಿ ಪ್ರೀತಿ ಮಾಡಿದ

ಎಂಬ ಸಂಸ್ಕೃತಿ ಮತ್ತು ಭೂಮಿಯ ಒಡೆತನದ ಮೂಲಕ ನಡೆಯುವ ಅಧಿಕಾರ ಚಲಾವಣೆ ಜೀವಂತವಾಗಿದೆ. ಸಿನಿಮಾ ಇದನ್ನು ಧೈರ್ಯವಾಗಿ ಪ್ರಶ್ನಿಸುತ್ತದೆ.

ಜಾತಿ ಮತ್ತು ಆರ್ಥಿಕ ಅಸಮಾನತೆ: ಗ್ರಾಮೀಣ ಭಾರತದಲ್ಲಿ ಜಾತಿ ಮತ್ತು ಆಸ್ತಿ (ಭೂಮಿ) ಒಂದಕ್ಕೊಂದು ಬೆಸೆದುಕೊಂಡಿವೆ. ಯಾರ ಕೈಯಲ್ಲಿ ಭೂಮಿ ಇದೆಯೋ ಅವರೇ ನ್ಯಾಯವನ್ನು ನಿರ್ಧರಿಸುವ ನೀತಿಯ ವಿರುದ್ಧ ರಾಚಯ್ಯನ ಹೋರಾಟ ಮಾಡುವ ಅಂಶವನ್ನು ಸಿನಿಮಾ ಪ್ರತಿಬಿಂಬಿಸುತ್ತದೆ.

ಸಂವಿಧಾನದ ಅರಿವು: ಇಂದಿನ ಯುವ ಪೀಳಿಗೆಗೆ ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಸಂವಿಧಾನವೇ ದೊಡ್ಡ ಅಸ್ತ್ರ ಎಂಬುದನ್ನು ಸಿನಿಮಾ ತೋರಿಸಿಕೊಡುತ್ತದೆ. ಇದು ಕೇವಲ ಕತೆಯಲ್ಲ, ಇಂದು ಶೋಷಿತ ವರ್ಗಗಳು ಕಂಡುಕೊಳ್ಳುತ್ತಿರುವ ಹೊಸ ಹಾದಿ.

ಅಳಿದು ಉಳಿದವರ ವ್ಯಥೆ: ಅಭಿವೃದ್ಧಿಯ ಹೆಸರಿನಲ್ಲಿ ಅಥವಾ ಪರಂಪರೆಯ ಹೆಸರಿನಲ್ಲಿ ತುಳಿಯಲ್ಪಟ್ಟ ಜನರ ನೋವು ಇಂದಿಗೂ ಹಾಗೆ ಇದೆ. ಸಿನಿಮಾ ಆ ನೋವಿಗೆ ಒಂದು ಮುಖವನ್ನು ನೀಡಿದೆ.

ಇಂತ ಒಳ್ಳೆಯ ಕಥೆಯುಳ್ಳ, ಒಳ್ಳೆ ನಟನೆವುಳ್ಳ, ಸಾಮಾಜಿಕ ಮೌಲ್ಯಗಳನ್ನು ಹೊಂದಿದ ಸಿನಿಮಾವನ್ನು ಪ್ರೋತ್ಸಾಹಿಸದಿದ್ದರೆ, ನಾವ್ಯಾರು ಸಿನಿಮಾ ಪ್ರೇಮಿಗಳಾಗಿ ಅಥವಾ ಮಾನವೀಯ ಮೌಲ್ಯಗಳು ಹೊಂದಿದ ಮನುಷ್ಯರಾಗಿ ಉಳಿಯುವುದಿಲ್ಲ. ಲ್ಯಾಂಡ್‌ಲಾರ್ಡ್ ಕೇವಲ ಮನರಂಜನೆ ನೀಡುವ ಸಿನಿಮಾವಲ್ಲ, ಬದಲಿಗೆ ನಮ್ಮ ಸುತ್ತಲಿನ ವ್ಯವಸ್ಥೆಯನ್ನು ಪ್ರಶ್ನಿಸುವಂತೆ ಮಾಡುವ ಒಂದು ಕಿಡಿ. ಸಂವಿಧಾನದ ಮೌಲ್ಯಗಳನ್ನು ಮತ್ತು ಮಾನವೀಯತೆಯನ್ನು ಎತ್ತಿ ಹಿಡಿಯುವ ಇಂತಹ ಸಿನಿಮಾಗಳು ಇಂದಿನ ಕಾಲಕ್ಕೆ ಅಗತ್ಯವಾಗಿವೆ. ಭವಿಷ್ಯದಲ್ಲಿ ಇಂತ ಸಿನಿಮಾಗಳು ಬರಬೇ

ವಂದೇ ಮಾತರಂ ಹಾಡು ಹೇಳಲು ಬಾರದ ಬಿಜೆಪಿ ನಾಯಕರಿಂದ ಮುಸ್ಲಿಮರಿಗೆ ಧಮ್ಕಿ!

ದೇಶಭಕ್ತಿ ಯಾವುದೇ ಧರ್ಮದ ಸ್ವತ್ತಲ್ಲ. ಅದು ಸಂವಿಧಾನದಲ್ಲಿ ನಂಬಿಕೆ ಇಡುವುದು, ದೇಶದ ಕಾನೂನನ್ನು ಗೌರವಿಸುವುದು, ಸಹಚರರನ್ನು ಮಾನವೀಯತೆಯಿಂದ ನೋಡುವುದಾಗಿದೆ. ಆದರೆ, ದ್ವೇಷ ರಾಜಕಾರಣಕ್ಕೆ ಇದು ಅಡ್ಡಿಯಾಗುತ್ತದೆ. ಅದಕ್ಕಾಗಿಯೇ ಧರ್ಮವನ್ನು ಆಯುಧವನ್ನಾಗಿ ಮಾಡಿಕೊಂಡು, ದೇಶಭಕ್ತಿಯನ್ನೇ ಶಸ್ತ್ರವಾಗಿ ಬಳಸಲಾಗುತ್ತಿದೆ.

ದ್ವೇಷವನ್ನು ಬಿಟ್ಟು ದೇಶವನ್ನು ಕಟ್ಟಬೇಕಾಗಿರುವ ಕಾಲಘಟ್ಟದಲ್ಲೂ, ಕೆಲವರು ಧರ್ಮ ಎಂಬ ಬೇಗುದಿಗೆ ಬಿದ್ದು ಸಮಾಜವನ್ನು ವಿಭಜಿಸುವ ಕೃತ್ಯಕ್ಕೆ ಇಳಿದಿದ್ದಾರೆ. ದೇಶಭಕ್ತಿಯನ್ನು ಧರ್ಮದ ಆಧಾರದ ಮೇಲೆ ಅಳೆಯುವ ಈ ಮನಸ್ಥಿತಿ ಅತ್ಯಂತ ಅಪಾಯಕಾರಿ. ಇವರ ದೃಷ್ಟಿಯಲ್ಲಿ ಒಂದು ಧರ್ಮದವರು ಮಾತ್ರ ದೇಶಭಕ್ತರು, ಇನ್ನೊಂದು ಧರ್ಮದವರು ದೇಶವಿರೋಧಿಗಳು ಎಂಬ ತೀರ್ಮಾನಕ್ಕೆ ಬಂದುಬಿಟ್ಟಿದ್ದಾರೆ.

ಹಿಂದೂ ಎಂದರೆ ದೇಶಕ್ಕಾಗಿ ಬದುಕುವವರು, ಮುಸ್ಲಿಂ ಎಂದರೆ ದೇಶವನ್ನು ನಾಶಮಾಡಲು ಹುಟ್ಟಿದವರು ಎಂಬ ಸುಳ್ಳು ನರೇಟಿವ್ ಅನ್ನು ಮೂಲಭೂತವಾದಿಗಳು ಜಾಣ್ಮೆಯಿಂದ ನಿರ್ಮಿಸುತ್ತಿದ್ದಾರೆ. ಇದು ಇತಿಹಾಸಕ್ಕೂ, ವಾಸ್ತವಕ್ಕೂ ಸಂಪೂರ್ಣ ವಿರುದ್ಧವಾಗಿದೆ. ಈ ದೇಶದ ಸ್ವಾತಂತ್ರ್ಯ ಹೋರಾಟದಿಂದ ಹಿಡಿದು, ಸೇನೆ, ವಿಜ್ಞಾನ, ಶಿಕ್ಷಣ, ಕ್ರೀಡೆ, ಸಾಹಿತ್ಯದವರೆಗೆ ಎಲ್ಲ ಕ್ಷೇತ್ರಗಳಲ್ಲೂ ಎಲ್ಲ ಧರ್ಮದವರೂ ಸಮಾನವಾಗಿ ದೇಶಕ್ಕೆ ಕೊಡುಗೆ ನೀಡಿದ್ದಾರೆ. ಮುಸ್ಲಿಂ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಅವರು ಸ್ವಾತಂತ್ರ್ಯ ಸಂಗ್ರಾಮಕ್ಕೆ ಕೊಟ್ಟ ಕೊಡುಗೆಗಳು ಕಡಿಮೆಯೇನಿಲ್ಲ. ಮುಸ್ಲಿಂರು ದೇಶಕ್ಕಾಗಿ ದುಡಿದಿದ್ದಾರೆ. ದುಡಿಯುತ್ತಿದ್ದಾರೆ. ಈ ದೇಶ ಎಲ್ಲರದ್ದೂ. ಇದನ್ನ ಅರೆಯದೇ ಇರುವ ಹುಳಿ ಹಿಂಡುವ ಮನಸ್ಥಿತಿ ಉಳ್ಳವರು ತಮ್ಮ ಕೀಳು ಮನಸ್ಥಿತಿಯನ್ನ ಹೊರಹಾಕುತ್ತ ಮುಸ್ಲಿಮರಿಗೆ ಎಚ್ಚರಿಕೆ ನೀಡುತ್ತಿದ್ದಾರೆ.

ಹೌದು, ''ಮುಸ್ಲಿಮರು ಭಾರತದಲ್ಲಿ ಉಳಿಯಬೇಕೆಂದ್ರೆ ಕಡ್ಡಾಯವಾಗಿ ವಂದೇ ಮಾತರಂ ಹಾಡು ಹಾಡಬೇಕು'' ಎಂಬ ಎಚ್ಚರಿಕೆಯನ್ನ ಬಿಜೆಪಿ ಸಂಸದ ಅನುರಾಗ್ ಠಾಕೂರ್ ದೇಶವಾಸಿಗಳಾದ ಮುಸ್ಲಿಮರಿಗೆ ನೀಡಿದ್ದಾರೆ. ಅನುರಾಗ್ ಠಾಕೂರ್ ಅವರ ಈ ಹೇಳಿಕೆ ರಾಜಕೀಯ ವಲಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದ್ದು, ವಿರೋಧ ವ್ಯಕ್ತವಾಗಿದೆ.

2026ರ ಜನವರಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಸಂಸದ ಅನುರಾಗ್ ಠಾಕೂರ್, ''ಭಾರತದಲ್ಲಿ ವಾಸಿಸಲು ಬಯಸುವವರು ರಾಷ್ಟ್ರಧ್ವಜಕ್ಕೆ ನಮಸ್ಕರಿಸಿ ವಂದೇ ಮಾತರಂ ಹೇಳಬೇಕು. ಇಲ್ಲದಿದ್ದರೆ, ಅವರು ದೇಶವನ್ನು ತೊರೆಯಬೇಕು'' ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಕ್ಷಣಾರ್ಧದಲ್ಲಿ ವೈರಲ್ ಆದ ಈ ವಿಡಿಯೋಗೆ ವಿಭಿನ್ನ ಪ್ರತಿಕ್ರಿಯೆಗಳು ಬಂದಿವೆ. ಠಾಕೂರ್ ಬೆಂಬಲಿಗರು ಈ ಹೇಳಿಕೆಯನ್ನ ಸಮರ್ಥಿಸುತ್ತ ರಾಷ್ಟ್ರಧ್ವಜ ಮತ್ತು ರಾಷ್ಟ್ರಗೀತೆಯಂತಹ ಚಿಹ್ನೆಗಳ ಗೌರವ, ರಾಷ್ಟ್ರೀಯ ಏಕತೆ ಹಾಗೂ ಸಾಮೂಹಿಕ ನಾಗರಿಕ ಮೌಲ್ಯಗಳ ಒತ್ತಿ ಹೇಳುವ ಮಾತು ಎಂದು ಹೇಳುತ್ತಿದ್ದರೇ, ಹಲವರು ಈ ಹೇಳಿಕೆಯನ್ನ ಕಟುವಾಗಿ ಟೀಕಿಸಿದ್ದಾರೆ. ದೇಶಭಕ್ತಿಯನ್ನು ಧರ್ಮದ ಆಧಾರದ ಮೇಲೆ ನಿರ್ಧರಿಸುವುದು ಸಂವಿಧಾನ ವಿರೋಧಿ ಎಂದು ಹೇಳಿದ್ದಾರೆ.



''ದೇಶಭಕ್ತಿ ಯಾವುದೇ ಧರ್ಮದ ಸ್ವತ್ತಲ್ಲ. ಭಾರತದಲ್ಲಿ ಬದುಕುವ ಹಕ್ಕು ಸಂವಿಧಾನ ನೀಡಿದ ಹಕ್ಕು, ಯಾವುದೇ ಘೋಷಣೆ ಅಥವಾ ಗೀತೆ ಹಾಡುವುದಕ್ಕೆ ಅದು ಅವಲಂಬಿತವಲ್ಲ'' ಎಂದು ಹಲವರು ಅನುರಾಗ್ ಠಾಕೂರ್ ಹೇಳಿಕೆಗೆ ತಿರುಗೇಟು ನೀಡಿದ್ದಾರೆ.

ಇದು ದ್ವೇಷ ಭಾಷಣ ಎಂದು ಖಂಡಿಸಿರುವ ನಾಗರಿಕ ಸಂಘಟನೆಗಳು, ಧರ್ಮದ ಆಧಾರದ ಮೇಲೆ ನಾಗರಿಕರನ್ನು ದೇಶಭಕ್ತರು-ದೇಶದ್ರೋಹಿಗಳು ಎಂದು ವಿಭಜಿಸುವ ಪ್ರಯತ್ನಗಳು ದೇಶದ ಏಕತೆಗೆ ಅಪಾಯಕಾರಿಯೆಂದು ಎಚ್ಚರಿಕೆ ನೀಡಿವೆ.

ವಂದೇ ಮಾತರಂ ಹಾಡದ ಮುಸ್ಲಿಂರು ದೇಶ ಬಿಟ್ಟು ಹೋಗಬೇಕು ಎಂದು ಹೇಳುವ ಇವರುಗಳಿಗೆ ವಂದೇ ಮಾತರಂ ಬಗ್ಗೆ ಎಷ್ಟು ಗೊತ್ತಿದೆ. ವಾಸ್ತವವಾಗಿ ವಂದೇ ಮಾತರಂ ಗೀತೆಯ ಇತಿಹಾಸ, ಅದರ ಅರ್ಥ ಮತ್ತು ಸಂವಿಧಾನಾತ್ಮಕ ಸ್ಥಾನಮಾನ ಕುರಿತು ಎಷ್ಟು ತಿಳಿದಿದೆ.

ವಂದೇ ಮಾತರಂ ಎಂಬ ವಿಚಾರವನ್ನ ಇಟ್ಟುಕೊಂಡು ಮುಸ್ಲಿಂರ ಮೇಲೆ ಹರಿಹಾಯುವ ಈ ಹಿಂದುತ್ವವಾದಿಗಳಿಗೆ ವಂದೇ ಮಾತರಂ ಬಗ್ಗೆ ಗಂಧ - ಗಾಳಿಯೂ ತಿಳಿದಿಲ್ಲ. ಇದಕ್ಕೆ ಹಲವಾರು ಉದಾಹರಣೆಗಳಿವೆ.

ಎಬಿಪಿ ನ್ಯೂಸ್‌ನಲ್ಲಿ ಚರ್ಚೆ ನಡೆಯುವ ಸಮಯದಲ್ಲಿ ನಿರೂಪಕರು ವಂದೇ ಮಾತರಂ ಬಗ್ಗೆ ಆ ಹಾಡಿನಲ್ಲಿರುವ ಅರ್ಥದ ಬಗ್ಗೆ ವಿಶ್ವ ಹಿಂದೂ ಪರಿಷತ್ ನಾಯಕ ವಿನೋದ್ ಬನ್ಸಾಲ್ ಅವರಿಗೆ ಪ್ರಶ್ನೆ ಮಾಡುತ್ತಾರೆ. ಆದರೆ, ಇದಕ್ಕೆ ಉತ್ತರಿಸಲು ತಡವರಿಸಿದ ಅವರು ನನ್ನನ್ನ ಪರೀಕ್ಷೆ ಮಾಡುತ್ತಿದ್ದೀರಾ ಎಂದು ಸಿಟ್ಟಿಗೇಳುತ್ತಾರೆ. ಅವರಿಗೆಯೇ ವಂದೇ ಮಾತರಂ ಗೀತೆ ಬಗ್ಗೆ ತಿಳಿದಿಲ್ಲ. ಆದರೆ, ಮುಸ್ಲಿಮರ ಮೇಲೆ ಹೇರಲು ಬಯಸುತ್ತಾರೆ.

ಮತ್ತೊಂದು, ಟಿವಿ ಚರ್ಚೆಯಲ್ಲಿ ಬಿಹಾರದ ಭಾರತೀಯ ಜನತಾ ಪಕ್ಷದ ವಕ್ತಾರ ನವೀನ್ ಕುಮಾರ್ ಸಿಂಗ್ ಅವರಿಗೆ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯ ಸದಸ್ಯರೊಬ್ಬರು ತಮ್ಮ ದೇಶಭಕ್ತಿಯನ್ನು ಸಾಬೀತುಪಡಿಸಲು ವಂದೇ ಮಾತರಂ ಹಾಡುವಂತೆ ಸವಾಲು ಹಾಕುತ್ತಾರೆ. ಈ ಸವಾಲನ್ನ ಸ್ವೀಕರಿಸಿದ ಸಿಂಗ್ ವಂದೇ ಮಾತರಂ ಹಾಡು ಹಾಡಲು ಶುರು ಮಾಡಿದ್ದಾರೆ. ಆ ನಂತರವೇ ಇವರ ಬಂಡವಾಳ ಬಯಲಾಗಿದೆ. ವಂದೇ ಮಾತರಂ ಹಾಡು ಹಾಡಲು ಕಷ್ಟಪಟ್ಟಿರುವ ಇವರು ನೋಡಿಕೊಂಡು ಕೂಡ ತಪ್ಪು ತಪ್ಪಾಗಿ ಹಾಡಿ ತಮ್ಮ ದೇಶ ಪ್ರೇಮವನ್ನು ಪ್ರದರ್ಶನ ಮಾಡಿದ್ದಾರೆ. ತಪ್ಪು ತಪ್ಪಾಗಿ ಹಾಡನ್ನು ಹಾಡಿ ಬಿಜೆಪಿ ಪಕ್ಷವನ್ನು ಮುಜುಗರಕ್ಕೀಡು ಮಾಡಿದ್ದರು ಎಂದು ಬಿಜೆಪಿ ಮುಖಂಡರು ಇವರ ವಿರುದ್ಧ ಕಿಡಿಕಾರಿದ ಘಟನೆಯೂ ಕೂಡ ನಡೆದಿತ್ತು.

ಮೊಬೈಲ್ ಫೋನ್‌ನಲ್ಲಿ ಓದುತ್ತ ತಪ್ಪಾಗಿ ಹಾಡಿದ ಅವರು ವಂದೇ ಮಾತರಂ ಬದಲಾಗಿ ಬಂದೇ ಮಾತರಂ ಎಂದಿದ್ದಾರೆ. ಪುಲಕಿತ್ ಯಾಮಿನಿಮ್ ಎಂಬ ಪದವನ್ನು ಪುಲ್ಕಿತ್ಯಾಮ್ ಎಂದು ಉಚ್ಚರಿಸಿದ್ದಾರೆ. ಕೇಲವೇ ಗಂಟೆಗಳಲ್ಲಿ ಇವರ ವಿಡಿಯೋ ವೈರಲ್ ಆಗಿ ಹಲವಾರು ಟೀಕೆಗಳಿಗೆ ಗುರಿಯಾಗಿತ್ತು.

ವಂದೇ ಮಾತರಂಗೆ ಗೌರವ ನೀಡಲಾಗುತ್ತದೆ. ಆದರೆ, ಈ ಹಾಡನ್ನ ಹಾಡುವುದು ಕಡ್ಡಾಯವಲ್ಲ ಎಂಬ ತತ್ವವನ್ನು ದೇಶ ಅಳವಡಿಸಿಕೊಂಡಿದೆ. ಇದನ್ನ ತಿಳಿದಿರುವ ಹಿಂದುತ್ವವಾದಿಗಳು ಮುಸ್ಲಿಮರನ್ನು ನಿರ್ನಾಮ ಮಾಡಲು ಈ ದಾರಿಯೇ ಸರಿ ಎಂದು ಮುನ್ನುಗ್ಗುತ್ತಿದ್ದಾರೆ.

ದೇಶಭಕ್ತಿ ಯಾವುದೇ ಧರ್ಮದ ಸ್ವತ್ತಲ್ಲ. ಅದು ಸಂವಿಧಾನದಲ್ಲಿ ನಂಬಿಕೆ ಇಡುವುದು, ದೇಶದ ಕಾನೂನನ್ನು ಗೌರವಿಸುವುದು, ಸಹಚರರನ್ನು ಮಾನವೀಯತೆಯಿಂದ ನೋಡುವುದಾಗಿದೆ. ಆದರೆ, ದ್ವೇಷ ರಾಜಕಾರಣಕ್ಕೆ ಇದು ಅಡ್ಡಿಯಾಗುತ್ತದೆ. ಅದಕ್ಕಾಗಿಯೇ ಧರ್ಮವನ್ನು ಆಯುಧವನ್ನಾಗಿ ಮಾಡಿಕೊಂಡು, ದೇಶಭಕ್ತಿಯನ್ನೇ ಶಸ್ತ್ರವಾಗಿ ಬಳಸಲಾಗುತ್ತಿದೆ.

ಇಂತಹ ವಿಭಜನೆಯ ರಾಜಕಾರಣ ದೇಶವನ್ನು ಬಲಪಡಿಸುವುದಿಲ್ಲ. ಒಳಗೊಳಗೇ ಕುಸಿಯುವಂತೆ ಮಾಡುತ್ತದೆ. ದೇಶ ಉಳಿಯಬೇಕಾದರೆ, ದೇಶಭಕ್ತಿ ಧರ್ಮಕ್ಕಿಂತ ದೊಡ್ಡದು ಎಂಬ ಸತ್ಯವನ್ನು ಸಮಾಜ ಮತ್ತೆ ನೆನಪಿಸಿಕೊಳ್ಳಬೇಕು. ಇಲ್ಲವಾದರೆ, ದೇಶದ ಹೆಸರಿನಲ್ಲಿ ನಡೆಯುವ ಈ ದ್ವೇಷವೇ ದೇಶಕ್ಕೆ ಅತಿ ದೊಡ್ಡ ಅಪಾಯವಾಗುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR